ಸಂಪುಟ : 10 ಸಂಚಿಕೆ: 137 ಪುಟ : 4+2 ಬೆಲೆ: 3.00 ಗುರುವಾರ ಜುಲೈ 03 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 137 Pages : 4+2 Price : 3.00 Thursday July 03 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ಗಜೇಂದ್ರಗಡ ಪುರಸಭೆ ವ್ಯಾಪ್ತಿಯಲ್ಲಿ ಸ್ವಚ್ಛ ಭಾರತ್ ಮಿಷನ್ 2.0 ರ ಅಡಿಯಲ್ಲಿ ಐಇಸಿ ಮಾಹಿತಿ, ಶಿಕ್ಷಣ ಮತ್ತು ಸಂವಹನ ಘಟಕದಡಿಯಲ್ಲಿ ಘನ ಮತ್ತು ದ್ರವ ತ್ಯಾಜ್ಯ ನಿರ್ವಹಣೆಯ ಕುರಿತು ನಗರ ಸ್ಥಳೀಯ ಮಟ್ಟದಲ್ಲಿ ವಿವಿಧ ಬಗೆಯ ಚಟುವಟಿಕೆಗಳನ್ನು ಕೈಗೊಳ್ಳಲು ಡೇ ನಲ್ಮ್ ಯೋಜನೆಯ ಸ್ವಸಹಾಯ ಸದಸ್ಯರನ್ನು ಕಮ್ಯೂನಿಟಿ ಮೊಬೈಲೈಜರ್ ಹುದ್ದೆಗೆ ಮಾಸಿಕ ಗೌರವ ಧನ ಆಧಾರದ ಮೇಲೆ ತಾತ್ಕಾಲಿಕ ಸೇವೆ ಪಡೆದುಕೊಳ್ಳಲು ಅವಕಾಶವಿದೆ. ಅರ್ಜಿ ಸಲ್ಲಿಸುವ ಕೊನೆಯ ದಿನ ಜುಲೈ 7 ಆಗಿದ್ದು, ಹೆಚ್ಚಿನ ವಿವರಗಳಿಗಾಗಿ ಗಜೇಂದ್ರಗಡ ಪುರಸಭೆಯ ಆರೋಗ್ಯ ಶಾಖೆಯನ್ನು ಸಂಪರ್ಕಿಸಬಹುದಾಗಿದೆ.

## ವಸತಿ ಸೌಲಭ್ಯ ಕಲ್ಪಿಸಲು ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ನರಗುಂದ ಪುರಸಭೆ ವ್ಯಾಪ್ತಿಯಲ್ಲಿ ಕೇಂದ್ರ ಸರ್ಕಾರದ ಪ್ರಧಾನ ಮಂತ್ರಿ ಆವಾಸ್ ಯೋಜನೆ 2.0 ಯೋಜನೆಯಡಿಯಲ್ಲಿ ವಸತಿ ರಹಿತ ( ಕಚ್ಚಾ ಮನೆ ಹೊಂದಿರುವ ) ಮತ್ತು ನಿವೇಶನ ರಹಿತ ಕುಟುಂಬಗಳಿಗೆ ವಸತಿ ಸೌಲಭ್ಯ ಕಲ್ಪಿಸಲು Unifed web portal ನಲ್ಲಿ ಅರ್ಜಿ ಆಹ್ವಾನಿಸಲಾಗಿದೆ.

ವಸತಿ ಸೌಲಭ್ಯ ಪಡೆಯಲು http//pmay.urban.gov.in ದಲ್ಲಿ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. ಅರ್ಜಿ ಸಲ್ಲಿಸಲು ಜುಲೈ-15 ಕೊನೆಯ ದಿನವಾಗಿದ್ದು, ಹೆಚ್ಚಿನ ಮಾಹಿತಿಗಾಗಿ ನರಗುಂದ ಪುರಸಭೆಯ ವಸತಿ ವಿಭಾಗದ ಶಾಖೆಯಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

## ಅರ್ಜಿ ಸಲ್ಲಿಸುವ ಅವಧಿ ವಿಸ್ತರಣೆ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ನಗರಸಭೆ ವ್ಯಾಪ್ತಿಯಲ್ಲಿ ಸ್ವಚ್ಛ ಭಾರತ್ ಮಿಷನ್ 2.0 ಅಡಿಯಲ್ಲಿ ಐಇಸಿ ಮಾಹಿತಿ, ಶಿಕ್ಷಣ ಮತ್ತು ಸಂವಹನ ಘಟಕದಡಿಯಲ್ಲಿ ಘನ ಮತ್ತು ದ್ರವ ತ್ಯಾಜ್ಯ ನಿರ್ವಹಣೆಯ ಕುರಿತು ನಗರ ಸ್ಥಳೀಯ ಮಟ್ಟದಲ್ಲಿ ವಿವಿಧ ಬಗೆಯ ಚಟುವಟಿಕೆಗಳನ್ನು ಕೈಗೊಳ್ಳಲು ಡೇ ನಲ್ಮ್ ಯೋಜನೆಯ ಸ್ವ ಸಹಾಯ ಸದಸ್ಯರನ್ನು ಕಮ್ಯೂನಿಟಿ ಮೊಬೈಲೈಜರ್ ಹುದ್ದೆಗೆ ಮಾಸಿಕ ಗೌರವಧನ ಆಧಾರದ ಮೇಲೆ ತಾತ್ಕಾಲಿಕ ಸೇವೆ ಪಡೆದುಕೊಳ್ಳಲು ಅವಕಾಶವಿದ್ದು ಅರ್ಜಿ ಸಲ್ಲಿಸುವ ದಿನಾಂಕವನ್ನು ಜುಲೈ 7 ಸಂಜೆ 5.30 ರವರೆಗೆ ವಿಸ್ತರಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಗದಗ-ಬೆಟಗೇರಿ ನಗರಸಭೆ ಕಾರ್ಯಾಲಯ ದೂರವಾಣಿ ಸಂಖ್ಯೆ 08372-259932 ಸಂಪರ್ಕಿಸಬಹುದಾಗಿದೆ.

## ಅವಧಿ ವಿಸ್ತರಣೆ

■ವಿಜಯಸಾಕ್ಷಿ ಸುದ್ದಿ, ಗದಗ

2024-25ನೇ ಸಾಲಿನಲ್ಲಿ ರಾಜೀವ ಗಾಂಧಿ ವಿಶ್ವವಿದ್ಯಾಲಯದ ಮೆಟ್ರಿಕ್ ನಂತರದ ಕೋರ್ಸ್‌ಗಳಲ್ಲಿ ಅಭ್ಯಾಸ ಮಾಡುತ್ತಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಶುಲ್ಕ ಮರುಪಾವತಿ ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ದಿನಾಂಕವನ್ನು ಜುಲೈ 10 ರವರೆಗೆ ವಿಸ್ತರಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಗದಗ ಕಚೇರಿಯನ್ನು ಸಂಪರ್ಕಿಸಬಹುದಾಗಿದೆ.

ಮೂರು ದಿನಗಳ ಕಾಲ 'ಗ್ಯಾರಂಟಿ' ವಸ್ತು ಪ್ರದರ್ಶನ | ಸಾರ್ವಜನಿಕರನ್ನು ಆಕರ್ಷಿಸಿದ ಸೆಲ್ಫಿ ಕಾರ್ನರ್

# ಪಂಚ ಗ್ಯಾರಂಟಿಯಿಂದ ಸಮ ಸಮಾಜ

■ವಿಜಯಸಾಕ್ಷಿ ಸುದ್ದಿ, ಗದಗ

ಸಮ ಸಮಾಜ ನಿರ್ಮಾಣ ಮಾಡುವಲ್ಲಿ ಪಂಚ ಗ್ಯಾರಂಟಿ ಯೋಜನೆಗಳ ಪಾತ್ರ ಮಹತ್ತರವಾಗಿದೆ. ಬಡ ಮತ್ತು ಮಧ್ಯಮ ವರ್ಗದವರ ಜೀವನದಲ್ಲಿ ಸಂತೋಷ ತಂದಿದೆ ಎಂದು ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ ಹೇಳಿದರು.

ನಗರದ ಹೊಸ ಬಸ್ ನಿಲ್ದಾಣದಲ್ಲಿ ಜುಲೈ 2ರಿಂದ 4ರವರೆಗೆ ಆಯೋಜಿಸಿರುವ ಕರ್ನಾಟಕ ಸರ್ಕಾರದ 2 ವರ್ಷಗಳ ಸಾಧನೆ ಬಿಂಬಿಸುವ ವಸ್ತು ಪ್ರದರ್ಶನವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು ಸರಕಾರದ ಸಾಧನೆಗಳನ್ನು ಬಿಂಬಿಸುವ ಹಾಗೂ ಜನಪರ ಯೋಜನೆಗಳ ಮಾಹಿತಿಯನ್ನು ನೀಡುವ ವಸ್ತು ಪ್ರದರ್ಶನ ಹಮ್ಮಿಕೊಂಡಿರುವುದು ಶ್ಲಾಘನೀಯ. ಗೃಹಲಕ್ಷ್ಮೀ ಯೋಜನೆ ಮಹಿಳೆಯರನ್ನು ಆರ್ಥಿಕ ಸಬಲೀಕರಣದತ್ತ ದಿಟ್ಟ ಹೆಜ್ಜೆಯಾಗಿದೆ. ಹಸಿವು ಮುಕ್ತ ಕರ್ನಾಟಕ ಮಾಡುವ ದೃಢ ಸಂಕಲ್ಪದಿಂದ ಪ್ರತಿಯೊಬ್ಬ ಪಡಿತರದಾರರಿಗೆ ತಲಾ 10 ಕೆ ಜಿ ಆಹಾರ ಧಾನ್ಯ ಒದಗಿಸಲಾಗುತ್ತಿದೆ. ಗೃಹಜ್ಯೋತಿ ಯೋಜನೆಯಿಂದ ಉಚಿತ ಬೆಳಕು ನೀಡಿ ಸುಸ್ಥಿರ ಬದುಕನ್ನು ನಡೆಸಲು ಸಹಕಾರಿಯಾಗಿದೆ. ಶಕ್ತಿ ಯೋಜನೆಯಿಂದ ಮಹಿಳೆಯರಿಗೆ ನಿಜವಾದ ಶಕ್ತಿ ಬಂದಿದೆ.



ಯುವನಿಧಿಯಲ್ಲಿ ನೋಂದಣಿಯಾದ ಯುವಜನತೆಗೆ ಹಣ ನೀಡಲಾಗುತ್ತಿದೆ ಎಂದು ಹೇಳಿದರು.

ರೋಣ ತಾಲೂಕಿನ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಮಿಥನಗೌಡ ಪಾಟೀಲ ಮಾತನಾಡಿ, ಗ್ಯಾರಂಟಿ ಯೋಜನೆಗಳ ಜೊತೆಗೆ ಸಾಕಷ್ಟು ಅಭಿವೃದ್ಧಿ ಕೆಲಸಗಳನ್ನು ಪ್ರಾರಂಭಿಸಿ ರಾಜ್ಯವನ್ನು ಪ್ರಗತಿಯತ್ತ ಮುನ್ನಡೆಸುತ್ತಿದ್ದು, ಗ್ಯಾರಂಟಿಯಿಂದ ಬಡವರಿಗೆ, ಯುವಕರಿಗೆ, ಮಹಿಳೆಯರಿಗೆ ಅನುಕೂಲವಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕಬರ್‌ಸಾಬ್ ಬಬರ್ಚಿ, ಗದಗ ತಾಲೂಕು ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಅಧ್ಯಕ್ಷ ಅಶೋಕ ಮಂದಾಲಿ, ನೀಲಮ್ಮ ಬೋಳಣ್ಣನವರ, ಬಸವರಾಜ ಕಡೇಮನಿ, ಶಂಭು ಕಾಳೆ, ಸಂಗಮೇಶ ಕೆರಕಲಮಟ್ಟಿ, ಸಾವಿತ್ರಿ ಹೂಗಾರ, ದೇವರಡ್ಡಿ ತಿರ್ಲಾಪುರ, ಗಣೇಶ ಮಟ್ಟಾಲಿ, ಸಂಗಮೇಶ ಹಾದಿಮನಿ, ವಾರ್ತಾಧಿಕಾರಿ ವಸಂತ ಮಡ್ಲೂರ, ಮಹಿಳಾ ಮತ್ತು ಮಕ್ಕಳ ನಿರೂಪಣಾಧಿಕಾರಿ ರಾಧಾ ಮಣ್ಣೂರು, ಹುಲಿಗೆಮ್ಮ ಜೋಗೇರ ಹಾಜರಿದ್ದರು.

> ಸರ್ಕಾರದ 2 ವರ್ಷದ ಸಾಧನೆ ಆಚರಣೆ ರಾಜ್ಯಾದ್ಯಂತ ಸಂತೋಷದಿಂದ ಆಚರಿಸಲಾಗಿದೆ. ಪಂಚ ಗ್ಯಾರಂಟಿ ಮೂಲಕ ಜನರಿಗೆ ಕೊಟ್ಟ ಮಾತಿನಂತೆ ನಡೆದುಕೊಂಡಿದ್ದು ಜನರ ವಿಶ್ವಾಸ ಉಳಿಸಿಕೊಂಡಿದ್ದೇವೆ. ಗ್ಯಾರಂಟಿ ಯೋಜನೆ ಮೂಲಕ ಸಾಮಾನ್ಯ ಜನರಿಗೆ ಸ್ವಾಭಿಮಾನದ ಬದುಕನ್ನು ಕಟ್ಟುವಲ್ಲಿ ಯಶಸ್ವಿಯಾಗಿದ್ದೇವೆ. ಸಮ ಸಮಾಜ ನಿರ್ಮಾಣದ ಜೊತೆಗೆ ಆರ್ಥಿಕವಾಗಿ ಸಮಾನತೆ ಮೂಡಿದೆ.
>
> **- ಕೃಷ್ಣಗೌಡ ಎಚ್.ಪಾಟೀಲ.**
> ಗದಗ ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಸದಸ್ಯರು.

### ಮುಖ್ಯಮಂತ್ರಿಗಳೊಂದಿಗೆ ಸೆಲ್ಫಿ!

ವಸ್ತುಪ್ರದರ್ಶನದಲ್ಲಿ ನಾಡಿನ ಜನರ ಬದುಕು ಬೆಳಗಿಸಿದ ಗ್ಯಾರಂಟಿ ಯೋಜನೆಗಳ ಸಮಗ್ರ ಮಾಹಿತಿ, ಯಶೋಗಾಥೆಯನ್ನೊಳಗೊಂಡ ಗ್ಯಾರಂಟಿಯ ಸಮರ್ಪಣೆ, ಅಭಿವೃದ್ಧಿಯ ಸಂಕಲ್ಪದ 2 ವರ್ಷಗಳ ಸಾಧನಾ ಸಂಭ್ರಮದ ಪುಸ್ತಕವನ್ನು ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರೊಂದಿಗೆ ಪಡೆದುಕೊಳ್ಳುವಂತೆ ಬಿಂಬಿಸುವ ಸೆಲ್ಫಿ ಸಾರ್ವಜನಿಕರ ಗಮನ ಸೆಳೆಯಿತು.

'ವಚನ ಸಾಹಿತ್ಯ ಸಂರಕ್ಷಣಾ ದಿನಾಚರಣೆ' ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್

# ವಚನ ಸಾಹಿತ್ಯದ ತತ್ವಗಳನ್ನು ಮೈಗೂಡಿಸಿಕೊಳ್ಳಿ

■ವಿಜಯಸಾಕ್ಷಿ ಸುದ್ದಿ, ಗದಗ

ಯುವಜನಾಂಗ ವಚನ ಸಾಹಿತ್ಯದ ತತ್ವಗಳನ್ನು ಅರಿತು ನಿತ್ಯ ಜೀವನದಲ್ಲಿ ಅಳವಡಿಸಿಕೊಂಡು ಕಾಯಕ, ದಾಸೋಹ ಸಿದ್ಧಾಂತಗಳಡಿ ನವ ಸಮಾಜ ನಿರ್ಮಾಣ ಮಾಡಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಹೇಳಿದರು.

ನಗರದ ಶ್ರೀ ಜಗದ್ಗುರು ತೋಂಟದಾರ್ಯ ಕಲ್ಯಾಣ ಮಂಟಪದಲ್ಲಿ ಬುಧವಾರ ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರುಗಳ ಸಹಯೋಗದಲ್ಲಿ ಡಾ. ಫ.ಗು. ಹಳಕಟ್ಟಿಯವರ ಜನ್ಮದಿನದ ನಿಮಿತ್ತ 'ವಚನ ಸಾಹಿತ್ಯ ಸಂರಕ್ಷಣಾ ದಿನಾಚರಣೆ' ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕಬರಸಾಬ್ ಬಬರ್ಚಿ ಕಾರ್ಯಕ್ರಮವನ್ನು ಉದ್ಘಾಟಿಸಿದರು.

ಎಡೆಯೂರು ಶ್ರೀ ಜಗದ್ಗುರು



ತೊಂಟದಾರ್ಯ ಸಂಸ್ಥಾನ ಮಠದ ಜಗದ್ಗುರು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಿ ಮಾತನಾಡಿ, ಸಂಶೋಧಕ ಮತ್ತು ಸಾಹಿತ್ಯ ಪ್ರಚಾರಕರಾದ ಡಾ. ಫ.ಗು. ಹಳಕಟ್ಟಿಯವರು ವಕೀಲ ವೃತ್ತಿ ನಿರ್ವಹಿಸುತ್ತಿದ್ದರು. ಇಡೀ ರಾಜ್ಯಾದ್ಯಂತ ಅಲೆದಾಡಿ 12ನೇ ಶತಮಾನದ ಅನೇಕ ವಚನಗಳನ್ನು ಸಂಗ್ರಹಿಸಿ ವಚನ ಸಾಹಿತ್ಯವನ್ನು ಶಾಶ್ವತವಾಗಿ ಉಳಿಸುವಲ್ಲಿ ಶ್ರಮಿಸಿದರು. ಬ್ರಿಟಿಷ್‌ರ ಕಾಲದಲ್ಲಿ ಕನ್ನಡದ ಅತ್ಯಮೂಲ್ಯ ವಚನ ಸಾಹಿತ್ಯವನ್ನು ಪ್ರಕಟಿಸುವುದು ಸುಲಭ ಕಾರ್ಯವಾಗಿದ್ದಿಲ್ಲ. ಅವರಿಗೆ ಎದುರಾದ ಅಡೆ-ತಡೆಗಳನ್ನು ಎದುರಿಸಿ ಸಂಗ್ರಹಿಸಿದ ವಚನಗಳನ್ನು ಮುದ್ರಿಸಲು ತಮ್ಮ ಸ್ವಂತ ಮನೆಯನ್ನು ಮಾರಿರುವುದು ಅವರ ದೃಢವಾದ ಇಚ್ಛಾಶಕ್ತಿ ಎಂತಹದು ಎಂದು ತಿಳಿಯುತ್ತದೆ ಎಂದರು.

ವಿಶ್ರಾಂತ ಪ್ರಾಧ್ಯಾಪಕ ಡಾ. ಸಂಗಮನಾಥ ಲೋಕಾಪೂರ ಉಪನ್ಯಾಸ ನೀಡಿ ಮಾತನಾಡಿ, ಡಾ. ಫ.ಗು. ಹಳಕಟ್ಟಿಯವರು ಧಾರವಾಡದಲ್ಲಿ ಹುಟ್ಟಿ ವಿದ್ಯಾಭ್ಯಾಸ ಮುಗಿಸಿದ ನಂತರ ವಿಜಾಪುರದಲ್ಲಿ ತಮ್ಮ ವಕೀಲ ವೃತ್ತಿ ಪ್ರಾರಂಭಿಸಿದರು. ವಚನ ಸಾಹಿತ್ಯದ ಮೇಲಿನ ಅಪಾರ ಆಸಕ್ತಿಯಿಂದ ತಾಳೆಗರಿಯ ಪ್ರಾಚೀನ ಗ್ರಂಥಗಳನ್ನು ಸಂಪಾದಿಸಲು ಪ್ರಾಂಭಿಸಿ ವಚನ ಸಾಹಿತ್ಯವನ್ನು ಉಳಿಸಲು ಪಣತೊಟ್ಟರು. 1920ರ ಸಮಾರಿಗೆ ಸಾವಿರಾರು ಗ್ರಂಥಗಳ ▸▸3ನೇ ಪುಟಕ್ಕೆ

> ವಚನ ಸಾಹಿತ್ಯದ ಮೇಲಿನ ಕಾಳಜಿಯಿಂದ ಇಡೀ ರಾಜ್ಯಾದ್ಯಂತ ಅಲೆದಾಡಿ 12ನೇ ಶತಮಾನದ ಅನೇಕ ವಚನಗಳನ್ನು ಸಂಗ್ರಹಿಸಿ ವಚನ ಸಾಹಿತ್ಯವನ್ನು ಶಾಶ್ವತವಾಗಿ ಉಳಿಸುವಲ್ಲಿ ಹಳಕಟ್ಟಿಯವರ ಪಾತ್ರ ಮಹತ್ತರವಾಗಿದೆ. ಇಂತಹ ವಚನಗಳನ್ನು ಶ್ರಮವಹಿಸಿ ಸಂಗ್ರಹಿಸಿದ ಫ. ಗು. ಹಳಕಟ್ಟಿಯವರ ಕಾರ್ಯ ಶ್ಲಾಘನೀಯ. ಅರ್ಥಪೂರ್ಣ, ಅತ್ಯಮೂಲ್ಯ ವಚನಗಳನ್ನು ಉಳಿಸಿ-ಬೆಳೆಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ.
>
> **- ಸಿ.ಎನ್ ಶ್ರೀಧರ್.**
> ಜಿಲ್ಲಾಧಿಕಾರಿಗಳು, ಗದಗ.

ಕ್ರಿಶ್ಚಿಯನ್ ಮಿಷಿನರಿಯವರು ಇವರ ಗ್ರಂಥವನ್ನು ಮುದ್ರಿಸಲು ನಿರಾಕರಿಸಿದಾಗ ಮನೆಯನ್ನೇ ಮಾರಿ ಮುದ್ರಣಾಲಯನ್ನು ಸ್ಥಾಪಿಸಿ ಹಿತಚಿಂತಕ ಮುದ್ರಣಾಲಯ ಎಂದು ನಾಮಕರಣಗೊಳಿಸಿ ಮುದ್ರಣ ಕಾರ್ಯ ಆರಂಭ ಮಾಡಿದರು. ಶಿವಾನುಭವ ಪತ್ರಿಕೆ ಪ್ರಾರಂಭಿಸಿ ವಚನ ಸಾಹಿತ್ಯ ಶಾಶ್ವತವಾಗಿ ಉಳಿಯುವಂತೆ ಮಾಡಿದರು. 1926ರಲ್ಲಿ ಬಳ್ಳಾರಿಯಲ್ಲಿ ನಡೆದ 12ನೇ ಕನ್ನಡ ಸಾಹಿತ್ಯ ಸಮ್ಮೇಳನದ ಅಧ್ಯಕ್ಷತೆ ವಹಿಸಿದ್ದರು. 1928ರ ಜೂನ್‌ನಲ್ಲಿ ನಡೆದ ಕರ್ನಾಟಕ ಏಕೀಕರಣ ಪರಿಷತ್ತಿನ 3ನೇ ಅಧ್ಯಕ್ಷ ಪದವಿ ಗೌರವ, ಕರ್ನಾಟಕ ವಿಶ್ವವಿದ್ಯಾಲಯದ ಗೌರವ ಡಾಕ್ಟರೇಟ್, ಬ್ರಿಟಿಷ್ ಸರಕಾರದಿಂದ ರಾವ್ ಬಹದ್ದೂರ್ ಮತ್ತು ರಾವ್ ಸಾಹೇಬ ಪ್ರಶಸ್ತಿ, ವಚನ ಶಾಸ್ತ್ರ ಪ್ರವೀಣ, ವಚನ ಶಾಸ್ತ್ರ ಪಿತಾಮಹ ಮುಂತಾದ ಗೌರವಗಳಿಗೆ ಪಾತ್ರರಾದವರು ಎಂದು ಡಾ. ಸಂಗಮನಾಥ ಲೋಕಾಪೂರ ಉಪನ್ಯಾಸ ನೀಡಿದರು.

ಪತ್ರಿಕಾಗೋಷ್ಠಿಯಲ್ಲಿ ಜಿಲ್ಲಾ ಫುಟ್‌ಬಾಲ್ ಅಸೋಸಿಯೇಶನ್ ಅಧ್ಯಕ್ಷ ಸರ್ಫರಾಜ ಶೇಖ ಮಾಹಿತಿ

## ಇಂದಿನಿಂದ ಫುಟ್‌ಬಾಲ್ ತರಬೇತಿ




■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲೂ ಫುಟ್‌ಬಾಲ್ ಆಟಗಾರರ ಸಂಖ್ಯೆ ಹೆಚ್ಚುತ್ತಿದ್ದು, ಆಸಕ್ತರಿಗೆ ಗುಣಮಟ್ಟದ ತರಬೇತಿ ನೀಡಲು ಹಾಗೂ ಅರ್ಹ ತರಬೇತುದಾರರಿಂದ ತರಬೇತಿ ಸಿಗಲಿ ಎಂಬ ಉದ್ದೇಶದಿಂದ 'ಆಲ್ ಇಂಡಿಯಾ ಫುಟ್‌ಬಾಲ್ ಫೆಡರೇಷನ್'ನ 'ಡಿ' ಲೈಸೆನ್ಸ್ ಕೋರ್ಸ್‌ಗೆ ಜುಲೈ 3ರಿಂದ 8ರವರೆಗೆ ತರಬೇತಿ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಫುಟ್‌ಬಾಲ್ ಅಸೋಸಿಯೇಶನ್ ಅಧ್ಯಕ್ಷ ಸರ್ಫರಾಜ ಶೇಖ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಬುಧವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ಬೆರಳೆಣಿಕೆಯಷ್ಟು ಫುಟ್‌ಬಾಲ್ ಆಟಗಾರರಿದ್ದರು. ಆದರೆ, ಇದೀಗ ಯುವಕರು, ವಿದ್ಯಾರ್ಥಿಗಳು ಫುಟ್‌ಬಾಲ್ ಕ್ರೀಡೆಯತ್ತ ಆಸಕ್ತಿ ವಹಿಸುತ್ತಿದ್ದಾರೆ. ಆದರೆ, ಅವರೆಲ್ಲರಿಗೂ ತರಬೇತಿ ನೀಡಲು ಅರ್ಹ ತರಬೇತುದಾರರ ಕೊರತೆಯಿದ್ದು, ಈ ತರಬೇತಿಯಿಂದ ಕೊರತೆ ನೀಗಲಿದೆ. ಈ ಉದ್ದೇಶದಿಂದ ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ತರಬೇತಿ ನಡೆಯಲಿದೆ ಎಂದರು.

ತರಬೇತಿ ವೇಳೆ 24 ಸ್ಲಾಟ್‌ಗಳಿದ್ದು, ಈಗಾಗಲೇ ಎಲ್ಲವೂ ನೋಂದಣಿಯಾಗಿವೆ. ▸▸3ನೇ ಪುಟಕ್ಕೆ

> ಆಲ್ ಇಂಡಿಯಾ ಫುಟ್‌ಬಾಲ್ ಫೆಡರೇಷನ್‌ನ 'ಎ' ಲೈಸೆನ್ಸ್ ಡಿಪ್ಲೋಮಾ ಕೋಚ್ ಹಾಗೂ ಕರ್ನಾಟಕ ಸ್ಟೇಟ್ ಫುಟ್‌ಬಾಲ್ ಅಸೋಸಿಯೇಶನ್‌ನ ಕೋಚ್ ಎಜ್ಯುಕೇಟರ್ ಶಿವಕುಮಾರ ವರದರಾಜ ಮಾತನಾಡಿ, ಫುಟ್‌ಬಾಲ್ ತರಬೇತಿ ಪಡೆಯುವ ಆಸಕ್ತರಿಗೆ ಗುಣಮಟ್ಟದ ತರಬೇತಿ ಸಿಕ್ಕರೆ ಗುಣಮಟ್ಟದ ಕ್ರೀಡಾಪಟುಗಳು ಹೊರಹೊಮ್ಮುತ್ತಾರೆ. ಈ ನಿಟ್ಟಿನಲ್ಲಿ ಕೋರ್ಸ್ ನೆರವಾಗಲಿದೆ ಎಂದು ಹೇಳಿದರು.

## ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ಲಕ್ಷ್ಮೇಶ್ವರ ಪುರಸಭೆ ವ್ಯಾಪ್ತಿಯಲ್ಲಿ ಸ್ವಚ್ಛ ಭಾರತ್ ಮಿಷನ್ 2.0 ರ ಅಡಿಯಲ್ಲಿ ಐಇಸಿ ಮಾಹಿತಿ, ಶಿಕ್ಷಣ ಮತ್ತು ಸಂವಹನ ಘಟಕದಡಿಯಲ್ಲಿ ಘನ ಮತ್ತು ದ್ರವ ತ್ಯಾಜ್ಯ ನಿರ್ವಹಣೆಯ ಕುರಿತು ನಗರ ಸ್ಥಳೀಯ ಮಟ್ಟದಲ್ಲಿ ವಿವಿಧ ಬಗೆಯ ಚಟುವಟಿಕೆಗಳನ್ನು ಕೈಗೊಳ್ಳಲು ಡೇ ನಲ್ಮ್ ಯೋಜನೆಯ ಸ್ವ ಸಹಾಯ ಸದಸ್ಯರನ್ನು ಕಮ್ಯೂನಿಟಿ ಮೊಬೈಲೈಜರ್ ಹುದ್ದೆಗೆ ಮಾಸಿಕ ಗೌರವಧನ ಆಧಾರದ ಮೇಲೆ ತಾತ್ಕಾಲಿಕ ಸೇವೆ ಪಡೆದುಕೊಳ್ಳಲು ಅವಕಾಶವಿದ್ದು, ಅಗತ್ಯ ದಾಖಲಾತಿಗಳೊಂದಿಗೆ ಜುಲೈ 8 ರ ಸಂಜೆ 5 ಗಂಟೆಯೊಳಗಾಗಿ ನಿಗದಿತ ಅರ್ಜಿ ನಮೂನೆ ಪಡೆದು ಮಾಹಿತಿ ಭರ್ತಿ ಮಾಡಿ ಖುದ್ದಾಗಿ ಮುಖ್ಯಾಧಿಕಾರಿಗಳು ಲಕ್ಷ್ಮೇಶ್ವರ ಪುರಸಭೆ ವಿಳಾಸಕ್ಕೆ ಸಲ್ಲಿಸಬಹುದಾಗಿದೆ.

## ಜು. 9ರಂದು ಲೋಕಾಯುಕ್ತ ಜನ ಸಂಪರ್ಕ ಸಭೆ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಲೋಕಾಯುಕ್ತ ಗದಗ ಕಚೇರಿಯ ಪೊಲೀಸ್ ಅಧಿಕಾರಿಗಳು ಜುಲೈ 9 ರ ಬುಧವಾರದಂದು ಬೆಳಿಗ್ಗೆ 10.30 ಗಂಟೆಯಿಂದ ಮಧ್ಯಾಹ್ನ 1 ಗಂಟೆಯವರೆಗೆ ತಹಸೀಲ್ದಾರ್ ಕಚೇರಿ ಸಭಾಭವನ ನರಗುಂದದಲ್ಲಿ ಲೋಕಾಯುಕ್ತ ಜನಸಂಪರ್ಕ ಸಭೆ ಮತ್ತು ಸಾರ್ವಜನಿಕರಿಂದ ಅಹವಾಲು ಸ್ವೀಕಾರ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಅಂದು ಸಾರ್ವಜನಿಕರಿಂದ ದೂರು/ ಅಹವಾಲುಗಳನ್ನು ಸ್ವೀಕರಿಸಲಾಗುವುದು ಎಂದು ಕರ್ನಾಟಕ ಲೋಕಾಯುಕ್ತ ಪೊಲೀಸ್ ಉಪಾಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪತ್ರಿಕಾ ವಿತರಕರಿಗೆ ಸೌಲಭ್ಯ ಕಲ್ಪಿಸಿ



■ವಿಜಯಸಾಕ್ಷಿ ಸುದ್ದಿ, ಗದಗ

ಸಂಕಷ್ಟದಲ್ಲಿರುವ ಪತ್ರಿಕಾ ವಿತರಕರ ಕ್ಷೇಮಾಭಿವೃದ್ಧಿಗೆ ಸೌಲಭ್ಯ ಒದಗಿಸಬೇಕು ಎಂದು ಒತ್ತಾಯಿಸಿ ಗದಗ ಜಿಲ್ಲಾ ಪತ್ರಿಕಾ ವಿತರಕರ ಸಂಘದ ಸದಸ್ಯರು, ಗುರುವಾರ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸಂಘದ ಜಿಲ್ಲಾಧ್ಯಕ್ಷ ವೀರಬಸಯ್ಯ ವಿರಕ್ತಮಠ, ಪ್ರತಿನಿತ್ಯ ಸೂರ್ಯೋದಯಕ್ಕು ಮುನ್ನ ಚಳಿ-ಮಳೆ- ಗಾಳಿ ಎನ್ನದೆ ಮನೆ ಮನೆಗೆ ಹೋಗಿ ಪತ್ರಿಕೆ ವಿತರಣೆ ಮಾಡುತ್ತೇವೆ.

ಪತ್ರಿಕೆ ಮಾರಾಟದಿಂದ ಬರುವ ಅಲ್ಪ ಆದಾಯದಲ್ಲಿಯೇ ಜೀವನ ನಡೆಸುವುದು ಕಷ್ಟವಾಗಿದೆ. ಆದರೂ ಸರಕಾರಗಳು, ಸಂಘ-ಸಂಸ್ಥೆಗಳು ಪತ್ರಿಕಾ ವಿತರಕರ ಸಂಕಷ್ಟ ಪರಿಹರಿಸುವ ಕೆಲಸ ಮಾಡಿಲ್ಲ.

ಈ ನಿಟ್ಟಿನಲ್ಲಿ ಸರಕಾರ ಪತ್ರಿಕಾ ವಿತರಕರ ಕ್ಷೇಮಾಭಿವೃದ್ಧಿಗೆ ವಿಶೇಷ ಆದ್ಯತೆ ನೀಡಬೇಕು. ಪತ್ರಿಕಾ ವಿತರಕರಿಗೆ ಇರುವ ಸೌಲಭ್ಯಗಳ ಬಗ್ಗೆ ಮಾಹಿತಿ ನೀಡಿ, ಆ ಯೋಜನೆಗಳನ್ನು ಅನುಷ್ಠಾನವಾಗುವಂತೆ ಮಾಡಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಸಂಘದ ಪ್ರಮುಖರಾದ ಶಂಕರ್ ಕಂದಗಲ್, ಸಿದ್ದು ಮಡಿವಾಳರ, ಮಂಜುನಾಥ ಕಬಣೂರ, ಕಿರಣ ಮದ್ಲಿ, ಗಂಗಾಧರ ಮಡ್ಡಿ, ವಿನಾಯಕ ಬದಿ, ದಶರಥ ಹೊನ್ನಳ್ಳಿ, ಶರಣಪ್ಪ ಚನ್ನಪ್ಪಗೌಡ್ರ ಇತರರು ಉಪಸ್ಥಿತರಿದ್ದರು.

## ಸಂಪಾದಕೀಯ

# ಶಿಕ್ಷಣಕ್ಕೆ ಆದ್ಯತೆ: ಸರ್ಕಾರದ ಮಹತ್ವದ ಹೆಜ್ಜೆ

ಕರ್ನಾಟಕ ಸರ್ಕಾರವು ಸರ್ಕಾರಿ ಶಾಲೆಗಳ ಶೈಕ್ಷಣಿಕ ಗುಣಮಟ್ಟ ಸುಧಾರಿಸಲು ಮತ್ತು ಕಲಿಕಾ ಫಲಿತಾಂಶಗಳನ್ನು ಹೆಚ್ಚಿಸಲು ಮಹತ್ವದ ಹೆಜ್ಜೆಯಿಟ್ಟಿದೆ.

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಹೊರಡಿಸಿರುವ ಹೊಸ ಸುತ್ತೋಲೆಯು ಶಿಕ್ಷಕರು ಮತ್ತು ಮುಖ್ಯೋಪಾಧ್ಯಾಯರು ಶಾಲಾ ಸಮಯದಲ್ಲಿ ಬೋಧನೆಗೆ ಮಾತ್ರ ಆದ್ಯತೆ ನೀಡಬೇಕೆಂದು ಸ್ಪಷ್ಟವಾಗಿ ನಿರ್ದೇಶಿಸಿದೆ. ಇದು ಸ್ವಾಗತಾರ್ಹ ಬೆಳವಣಿಗೆಯಾಗಿದ್ದು, ಶಿಕ್ಷಣ ಕ್ಷೇತ್ರದ ಮೇಲೆ ಸಕಾರಾತ್ಮಕ ಪರಿಣಾಮ ಬೀರಲಿದೆ ಎಂದು ಆಶಿಸಲಾಗಿದೆ.

ವರ್ಷಗಳಿಂದ, ಸರ್ಕಾರಿ ಶಾಲಾ ಶಿಕ್ಷಕರು ಬೋಧನೆಯನ್ನು ಹೊರತುಪಡಿಸಿ ಹಲವು ಇತರೆ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಬೇಕಾದ ಅನಿವಾರ್ಯತೆ ಇತ್ತು.

ತರಬೇತಿಗಳು, ಸಭೆಗಳು, ಸಮೀಕ್ಷೆಗಳು, ಚುನಾವಣಾ ಕಾರ್ಯಗಳು ಮತ್ತು ಡೇಟಾ ಎಂಟ್ರಿ ಕೆಲಸಗಳು ಶಾಲಾ ಅವಧಿಯಲ್ಲೇ ನಡೆಯುತ್ತಿದ್ದವು, ಇದರಿಂದ ಮಕ್ಕಳ ಕಲಿಕೆಗೆ ಗಂಭೀರ ಅಡ್ಡಿಯಾಗುತ್ತಿತ್ತು.

ಈ ಹೊಸ ಸುತ್ತೋಲೆಯು ಶಾಲಾ ದಿನಗಳಲ್ಲಿ ಯಾವುದೇ ತರಬೇತಿ, ಸಭೆ, ಕಾರ್ಯಾಗಾರ ಅಥವಾ ಇತರೆ ಚಟುವಟಿಕೆಗಳಿಗೆ ಶಿಕ್ಷಕರನ್ನು ನಿಯೋಜಿಸುವುದನ್ನು ಸಂಪೂರ್ಣವಾಗಿ ನಿಷೇಧಿಸಿದೆ. ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೂ ಇಂತಹ ಆದೇಶಗಳನ್ನು ನೀಡದಂತೆ ಸೂಚಿಸಿರುವುದು ಸರ್ಕಾರದ ಬದ್ಧತೆಯನ್ನು ಎತ್ತಿ ತೋರಿಸುತ್ತದೆ.

ವಿದ್ಯಾರ್ಥಿಗಳನ್ನು ಶಾಲೆಯ ಹೊರಗಿನ ಕಾರ್ಯಕ್ರಮಗಳಿಗೆ ಕರೆದುಕೊಂಡು ಹೋಗುವುದನ್ನು ನಿರ್ಬಂಧಿಸಿರುವುದು ಮತ್ತು ಶಾಲಾ ಆವರಣದಲ್ಲಿ ಬಾಹ್ಯ ಪರೀಕ್ಷೆಗಳನ್ನು ನಿಷೇಧಿಸಿರುವುದು ಸಹ ಅತ್ಯಂತ ಸ್ತುತ್ಯಾರ್ಹ ಕ್ರಮಗಳು.

ಇಂತಹ ಚಟುವಟಿಕೆಗಳು ಮಕ್ಕಳ ಕಲಿಕಾ ಸಮಯವನ್ನು ವ್ಯರ್ಥ ಮಾಡುವುದಲ್ಲದೆ, ಅವರ ಸುರಕ್ಷತೆಗೂ ಧಕ್ಕೆಯಾಗಬಹುದು. ಶಿಕ್ಷಕರಿಗೆ ಯಾವುದೇ ಖಾಸಗಿ ಸಂಸ್ಥೆಗಳ ಸಾಫ್ಟ್‌ವೇರ್‌ಗಳಲ್ಲಿ ಡೇಟಾ ಎಂಟ್ರಿ ಮಾಡುವಂತೆ ಒತ್ತಾಯಿಸಬಾರದು ಎಂಬ ನಿರ್ದೇಶನವು ಶಿಕ್ಷಕರ ಮೇಲಿನ ಅನಗತ್ಯ ಆಡಳಿತಾತ್ಮಕ ಹೊರೆಯನ್ನು ಕಡಿಮೆ ಮಾಡುತ್ತದೆ.

ಈ ಹೊಸ ಮಾರ್ಗಸೂಚಿಗಳು ಶಿಕ್ಷಕರಿಗೆ ಬೋಧನೆಯ ಮೇಲೆ ಸಂಪೂರ್ಣವಾಗಿ ಗಮನಹರಿಸಲು ಅನುವು ಮಾಡಿಕೊಡುತ್ತವೆ. ಇದು ಮಕ್ಕಳ ಕಲಿಕಾ ಫಲಿತಾಂಶಗಳನ್ನು ಸುಧಾರಿಸುವಲ್ಲಿ ನಿರ್ಣಾಯಕ ಪಾತ್ರ ವಹಿಸಲಿದೆ.

ಶಿಕ್ಷಣ ಇಲಾಖೆಯ ಈ ದೂರದೃಷ್ಟಿಯ ನಿರ್ಧಾರವನ್ನು ಸಮರ್ಥವಾಗಿ ಅನುಷ್ಠಾನಗೊಳಿಸುವುದು ಅತ್ಯಗತ್ಯ. ಈ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಿದರೆ, ಕರ್ನಾಟಕದ ಸರ್ಕಾರಿ ಶಾಲೆಗಳು ಗುಣಮಟ್ಟದ ಶಿಕ್ಷಣ ನೀಡುವಲ್ಲಿ ಮಾದರಿಯಾಗಬಲ್ಲವು.

### ಇಂದು ಶ್ರೀ ಅಣ್ಣಯ್ಯ-ತಮ್ಮಯ್ಯನವರ 141ನೇ ಪುಣ್ಯ ಸ್ಮರಣೋತ್ಸವದ ನಿಮಿತ್ತ ಲೇಖನ

# ಪವಾಡ ಪುರುಷರ ನೆನೆಯೋಣ...

ಈ ನಾಡಿನಲ್ಲಿ ಧರ್ಮಕ್ಕೆ ಸಂಕಟ ಬಂದಾಗ ಧರ್ಮ ಸಂಸ್ಥಾಪನೆಗಾಗಿ ಧರ್ಮಾತ್ಮರು, ಶರಣ ಶರಣೆಯರು, ಯೋಗಿಗಳು, ಪುಣ್ಯ ಪುರುಷರು, ಸಾಧು-ಸಂತರು, ದಾರ್ಶನಿಕರು, ಮಹಾತ್ಮರು ಕಾಲಕಾಲಕ್ಕೆ ತಕ್ಕಂತೆ ಉದಯಿಸಿ ತಮ್ಮ ಆಚಾರ-ವಿಚಾರದಿಂದಲೋ ಅವತರಿಸಿ ಬಂದಿರುವುದರಿಂದ ಈ ನಾಡಿಗೆ ಧರ್ಮದ ನಾಡೆಂದು, ಮಹಾತ್ಮರ ಮಂಗಲದ ವಾಸಸ್ಥಾನವೆಂದು, ಭಕ್ತವಂತರ ನಾಡೆಂದೂ ಕರೆಯುವುದುಂಟು.

ಇಂತಹ ಪುಣ್ಯದ ಭೂಮಿಯಲ್ಲಿ ಅವತಾರಿ ಪುರುಷರಾಗಿ ಹಾಲಕೆರೆಯ ಪರಮಪೂಜ್ಯ ಮಹಾ ತಪಸ್ವಿ ಲಿಂಗೈಕ್ಯ ಗುರು ಅನ್ನದಾನ ಶಿವಯೋಗಿಗಳು, ಕೋಡಿಕೊಪ್ಪದ ಲಿಂಗೈಕ್ಯ ಹಠಯೋಗಿ ಹುಚ್ಚೀರಪ್ಪಜ್ಜನವರೂ, ಗದುಗಿನ ಗಾನಯೋಗಿ ಪಂಡಿತ ಲಿಂಗೈಕ್ಯ ಡಾ. ಪುಟ್ಟರಾಜ ಗವಾಯಿಗಳವರೂ ಜನಿಸಿ ಭಕ್ತರ ಬಾಳಿಗೆ ಬೆಳಕನ್ನು ಚೆಲ್ಲಿದರು.

ಇಂತಹ ಅನೇಕ ಮಹಿಮಾ ಪುರುಷರಲ್ಲಿ ಗದಗ ಜಿಲ್ಲೆಯ ರೋಣ ತಾಲೂಕಿನ ಜಕ್ಕಲಿಯ ಶ್ರೀ ಅಣ್ಣಯ್ಯ-ತಮ್ಮಯ್ಯನವರು ಶಿವಶರಣರಾಗಿ, ಭಕ್ತಿವಂತರಾಗಿ, ಗುರು-ಲಿಂಗ-ಜಂಗಮರ ಸೇವಾ ತತ್ಪರರಾಗಿ ದಾಸೋಹ ಮೂರ್ತಿಗಳಾಗಿ, ಮನುಕುಲದ ಉದ್ಧಾರಕ್ಕೆ ಶ್ರಮಿಸಿದ ಮಹಿಮಾ ಪುರುಷರಾಗಿ ಮೆರೆದ ವಿಷಯ ಇಂದಿಗೂ ಚಿರಸ್ಮರಣೀಯ.

ಕಲಬುರ್ಗಿ ಜಿಲ್ಲೆಯ ವಾಗಿನಗಿರಿಯಿಂದ ಬಂದ ಕುದರಿ ಮನೆತನದ ಉಭಯ ಶಿವಶರಣರು 1811ರಲ್ಲಿ ಅಣ್ಣಯ್ಯನವರು ಹಾಗೂ




1814ರಲ್ಲಿ ತಮ್ಮಯ್ಯನವರು ವೀರಶೈವ ಸದಾಚಾರ ಸಂಪನ್ನರಾದ ಸಣ್ಣಬಸವಪ್ಪ ಶೆಟ್ಟರ ಹಾಗೂ ಚನ್ನಮ್ಮ ಎಂಬ ಪುಣ್ಯ ದಂಪತಿಗಳ ಉದರದಿಂದ ಸತ್ಪುತ್ರರಾಗಿ ಜನ್ಮವೆತ್ತಿ ಬಂದರು.

ಈ ಶರಣರು ಸಾಮಾನ್ಯರಾಗಿ ಹುಟ್ಟಿ ಅಸಾಮಾನ್ಯರಾಗಿ ಬದುಕಿಗೆ ವಿಶಿಷ್ಟವಾದ ಅರ್ಥ ಕೊಟ್ಟು ಜನರ ಬಾಳಿಗೆ ಬೆಳಕನ್ನು ನೀಡಿದರು. ತಮ್ಮಯ್ಯ ಶರಣರು ಬಾಲ್ಯಾವಸ್ಥೆಯಲ್ಲಿಯ ಅನೇಕ ಪವಾಡಗಳನ್ನು ತೋರಿಸಿದರು. ಕೋಡಿಕೊಪ್ಪದ ಹಠಯೋಗಿ ಹುಚ್ಚೀರಪ್ಪಜ್ಜನವರು ಇಡಿ ಜಗತ್ತಿಗೆ ನೀಡಿದ ಸಂದೇಶ "ಯಾವುದು ಹೌದು ಅದು ಅಲ್ಲ; ಯಾವುದು ಅಲ್ಲ ಅದು ಹೌದು" ಎನ್ನುವ ನುಡಿಯನ್ನು ಸಾರಿದ ಹಾಗೇ 137 ವರ್ಷಗಳ ಹಿಂದೆಯ ತಮ್ಮಯ್ಯ ಶರಣರು ಕಲಿಯುಗದಲ್ಲಿ ದುಷ್ಟರ ಹಾವಳಿ ಹೆಚ್ಚಾಗುವುದು "ಸತ್ಯ ಸುಳ್ಳಾಗುತ್ತದೆ, ಸುಳ್ಳು ಸತ್ಯವಾಗುತ್ತದೆ" ಎಂಬ ಭವಿಷ್ಯವಾಣಿ ನುಡಿದರು. ಅಂದು ಅವರು ಹೇಳಿರುವ ಮಾತು ಇಂದಿನ ದಿನಗಳಲ್ಲಿ ನಾವು ನಿತ್ಯ ಕಾಣುತ್ತಿದ್ದೇವೆ.

ಶರಣರು ಬಾಲ್ಯದಲ್ಲಿಯೇ ಮಹಾತೇಜಸ್ವಿಗಳಾಗಿ ಅವತಾರಿಕ ಪುರುಷರಾಗಿ ಅದ್ಭುತ ಪವಾಡ ರೂಪಗಳನ್ನು ತೋರಿಸಿ ಮಹಾ ಶಿವಶರಣರೆನಿಸಿಕೊಂಡು ಆಟಿಕೆಯ ಸಾಮಗ್ರಿ ಕಟ್ಟಿಗೆಯ ಬಸವಣ್ಣನಿಂದ ಓಂಕಾರ ನುಡಿಸಿದರು. ಅದೇ ಬಸವಣ್ಣನಿಂದ ಬಂದ ಅಪವಾದಕ್ಕೆ ಕಳ್ಳನಿಂದ ನಿಜವ ನುಡಿಸಿದರು. ಇಂತಹ ಪವಾಡ ಸನ್ನಿವೇಶವನ್ನು, ಪ್ರತ್ಯಕ್ಷವಾಗಿ ಕಂಡ ಭಕ್ತರು ಇವರು ಸಾಮಾನ್ಯರಲ್ಲವೆಂದು ಮಹಾ ಪವಾಡ ಪುರುಷರೆಂದು ಅರಿತು ಅಪಾರವಾದ ಭಕ್ತಿ, ಪ್ರೀತಿ, ವಿಶ್ವಾಸಗಳನ್ನಿಟ್ಟುಕೊಂಡು ನಡೆಯ ಹತ್ತಿದರು.

ಗುರುವಿನ ಆಜ್ಞೆಯಂತೆ ಇಲಕಲ್ಲ ಪಟ್ಟಣದ ರುದ್ರಪ್ಪ ಮಾಟೂರ ಇವರ ಪುತ್ರಿ ಗಂಗಮ್ಮನವರನ್ನು ಅಣ್ಣಯ್ಯ (ಮಲ್ಲಿರ್ಜುನಪ್ಪ)ನೊಂದಿಗೆ ಹಾಗೂ ಜಾಲಿಹಾಳ ಗ್ರಾಮದ ಪರಪ್ಪ ಕಡಗದ ಇವರ ಪುತ್ರಿ ಅಂದಾನಮ್ಮನವರನ್ನು ತಮ್ಮಯ್ಯ (ಬಸವಶ್ರೇಷ್ಠ)ನೊಂದಿಗೆ 1835ರಲ್ಲಿ ಮದುವೆಯಾದರು. ಉಭಯ ಶರಣರು ಸಂಸಾರವನ್ನು ದಾಸೋಹ ಮೂರ್ತಿಗಳಾಗಿ ಸಾಗಿಸುತ್ತಿದ್ದರು.

1884ರಲ್ಲಿ ತಮ್ಮಯ್ಯನವರು, 1889ರಲ್ಲಿ ಅಣ್ಣಯ್ಯನವರು ಲಿಂಗೈಕ್ಯರಾದರು. ತಮ್ಮಯ್ಯ ಶರಣರು ತಾವು ಲಿಂಗೈಕ್ಯರಾಗುವುದಕ್ಕಿಂತ ಒಂದು ವಾರ ಮೊದಲೇ ಲಿಂಗೈಕ್ಯರಾಗುವುದನ್ನು ಹಾಗೂ ಐದು ವರ್ಷಗಳ ನಂತರ ನಮ್ಮ ಅಣ್ಣಯ್ಯನವರು ಲಿಂಗೈಕ್ಯರಾಗುತ್ತಾರೆಂದು ಭಕ್ತರಲ್ಲಿ ಭವಿಷ್ಯ ನುಡಿದಿದ್ದರು. ಐಕ್ಯರಾದ ಎಂಟು ದಿನಗಳ ನಂತರ ಶರಣರು ಮುಷ್ಠಿಗೇರಿ, ನೆಲ್ಲೂರು ಗ್ರಾಮದ ಜಂಗಮರಿಗೆ ದರ್ಶನ ಕೊಟ್ಟರು.

ಶರಣರ ಪವಾಡಗಳು ಒಂದೆರಡಲ್ಲ. ತಂದೆಯ ಕಾಲದಲ್ಲಿ ಹೊಲಮನೆಗಳನ್ನು ಬರೆಯಿಸಿಕೊಂಡಿದ್ದ ಸಾಲಗಾರರನ್ನು ಕರೆಯಿಸಿ ಶರಣರು ನಿಮ್ಮ ಹೊಲ, ಮನೆಗಳನ್ನು ನೀವು ತೆಗೆದುಕೊಳ್ಳಿ, ನಿಮ್ಮ ಸಾಲವು ತೀರಿ ಹೋಯಿತು ಎಂದು ಹೇಳಿ ಸಾವಿರಾರು ಸಾಲದ ಕಾಗದಪತ್ರಗಳನ್ನು ಸುಟ್ಟು ಹಾಕಿದರು. ಸಾಲಿಗರ ಮನೆಯಲ್ಲಿ ಬರೀ ನೀರು ಕುಡಿದು ನಿಮ್ಮ ಸಾಲ ಮುಟ್ಟಿರುತ್ತದೆ ಎಂದು ಹೇಳಿದರು. ಇವರ ಹೊಲದಲ್ಲಿ ಕುಸುಬಿ ಕದ್ದ ಕಳ್ಳರಿಗೆ ಬುದ್ಧಿ ಬರುವಂತೆ ಮಾಡಿ ಸನ್ಮಾರ್ಗಕ್ಕೆ ಹಚ್ಚಿದರು. ಸುಳ್ಳು ಹೇಳಿದ ಜಂಗಮನಿಗೆ ಬುದ್ಧಿ ಹೇಳಿದರು.

ಶರಣರ ಕಾಲಿಗೆ ಹುಣ್ಣು ಆಗಿತ್ತು. ಹುಳಗಳು ಬಿದ್ದಿರಲು ಅವುಗಳಿಗೆ ಸಕ್ಕರಿ ಹಾಕಿ ಜೋಪಾನ ಮಾಡುತ್ತಿದ್ದರು. ಸದ್ಭಕ್ತರಿಗೆ ಸಂತಾನ ಫಲವನ್ನು ಆಗ್ರಹಿಸಿದರು. ಮುಚ್ಚಿದ್ದ ಕದವನ್ನು ಕೂಡಲ ಸಂಗಮೇಶ್ವರನಿಂದ ತೆಗೆಯಿಸಿದರು. ಹಾವಿನ ಹೆಡೆಯಲ್ಲಿದ್ದ ರತ್ನದ ದೇವರ ಗರ್ಭ ಗುಡಿಯಲ್ಲಿಯ ಲಿಂಗಕ್ಕೆ ಬೆಳಕು ಮಾಡಿದರು. ಅಚ್ಚು ಮುರಿದ ಬಂಡಿಯನ್ನು ಹಾಲಕೆರೆಯಿಂದ ಜಕ್ಕಲಿಯವರೆಗೂ ನಡೆಯಿಸಿದರು. ಹೀಗೆ ಅನಂತಾ ಮಹಿಮೆಗಳಿಂದ ಜನರ ಮನ ಮಾಲಿನ್ಯವನ್ನು ಕಳೆದು ಅವರಿಗೆ ಸತ್ಯ, ಜ್ಞಾನದ ಬೆಳಕನ್ನು ತೋರಿಸಿದರು.

ಇಂತಹ ಪುಣ್ಯ ಪುರುಷರು ನಡೆದಾಡಿದ ಈ ನೆಲ ಪಾವನವಾಗಿದೆ. ಅವರ ಕಾಯಕದ ಬದುಕು, ನಮ್ಮ ಜೀವನದ ಸೂತ್ರವಾಗಿದೆ. ಪುಣ್ಯಾತ್ಮರು ತೋರಿದ ಮಾರ್ಗದಲ್ಲಿ ಭಕ್ತರೆಲ್ಲರೂ ಬದುಕು ಕಂಡುಕೊಂಡರೆ ಸಜ್ಜನ ಸಮಾಜ ನಿರ್ಮಾಣಗೊಂಡು ಸುಭಿಕ್ಷೆ ನೆಲೆಸಲು ಸಾಧ್ಯ. ಅವರ ದಾಸೋಹ ಕಾಯಕದ ಪ್ರೀತಿ, ಹಸಿವು ಮುಕ್ತ ಸಮಾಜ ನಿರ್ಮಾಣದ ಶರಣರ ಕಳಕಳಿ, ಸದೃಢ ಸಮಾಜದ ಪರಿಕಲ್ಪನೆ, ಇಂದಿನ ಪ್ರಜಾಪ್ರಭುತ್ವದ ಆಶಯ ಬಿಂಬಿಸುವ ಸದಾಶಯವಾಗಿದೆ.

**– ಸಂಗಮೇಶ ಮೆಣಸಗಿ.**
ಜಕ್ಕಲಿ.

## ಸಾರ್ವಜನಿಕರ ಗಮನಕ್ಕೆ

**■ ವಿಜಯಸಾಕ್ಷಿ ಸುದ್ದಿ, ಗದಗ**

ರೋಣ ಪಟ್ಟಣದ ಸಾರ್ವಜನಿಕರಿಗೆ ತಿಳಿಸುವುದೇನೆಂದರೆ, ರಿ.ಸ.ನಂ.495/1 ೦+1೦1+1೦2+1೦3 ಪುರಸಭೆ ಮಾಲ್ಕಿ ಆಸ್ತಿಯನ್ನು ಸಹಾಯಕ ಕೃಷಿ ನಿರ್ದೇಶಕರ ಕಾರ್ಯಾಲಯ ರೋಣ ಈ ಕಚೇರಿಗೆ ರೈತ ಸಂಪರ್ಕ ಕೇಂದ್ರ ಮತ್ತು ಗೋದಾಮ ಕಟ್ಟಡ ನಿರ್ಮಾಣಕ್ಕಾಗಿ ಮಂಜೂರು ಮಾಡಲು ತೀರ್ಮಾನಿಸಿರುತ್ತದೆ. ಈ ಕುರಿತು ಯಾವುದೇ ತಕರಾರು ಆಕ್ಷೇಪಣೆ ಇದ್ದಲ್ಲಿ 15 (ಹದಿನೈದು) ದಿವಸಗಳಲ್ಲಿ ಲಿಖಿತವಾಗಿ ಸಲ್ಲಿಸಬೇಕು. ತಪ್ಪಿದಲ್ಲಿ ಯಾವುದೇ ಆಕ್ಷೇಪಣೆಗಳು ಇರುವುದಿಲ್ಲ ಅಂತ ಸೂಕ್ತ ಕ್ರಮ ಜರುಗಿಸಲಾಗುವುದು ಎಂದು ರೋಣ ಪುರಸಭೆ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.


## ಅರ್ಜಿ ಆಹ್ವಾನ

**■ ವಿಜಯಸಾಕ್ಷಿ ಸುದ್ದಿ, ಗದಗ**

2024-25ನೇ ಸಾಲಿನಲ್ಲಿ ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮದಿಂದ ಉನ್ನತ ವಿದ್ಯಾಭ್ಯಾಸ ಮಾಡುತ್ತಿರುವ ಸಫಾಯಿ ಕರ್ಮಚಾರಿ ಮತ್ತು ಮ್ಯಾನುಯಲ್ ಸ್ಕ್ಯಾವೆಂಜರ್ಸ ಮಕ್ಕಳಿಗೆ ಲ್ಯಾಪ್ ಟಾಪ್ ವಿತರಿಸಲು ಗದಗ ಜಿಲ್ಲೆಗೆ 1 ಗುರಿ ನಿಗದಿಪಡಿಸಿ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಜುಲೈ 8 ಕೊನೆಯ ದಿನವಾಗಿದ್ದು, ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಜಿಲ್ಲಾ ವ್ಯವಸ್ಥಾಪಕರ ಕಾರ್ಯಾಲಯ, ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮ, ಜಿಲ್ಲಾ ಆಡಳಿತ ಭವನ, 1ನೇ ಮಹಡಿ, ಕೊಠಡಿ ಸಂಖ್ಯೆ 122/5 ಗದಗ – 582 103 ಫೋನ್ ನಂ. 08372–239557 ಸಂಪರ್ಕಿಸಬಹುದಾಗಿದೆ.

### ಡಾ. ಪುರದ ಪ್ರತಿಷ್ಠಾನದಲ್ಲಿ ರಾಷ್ಟ್ರೀಯ ವೈದ್ಯರ ದಿನಾಚರಣೆ

# ವೈದ್ಯರಲ್ಲಿ ವಿಶ್ವಾಸವಿಟ್ಟು ಚಿಕಿತ್ಸೆ ಪಡೆಯಬೇಕು




ಹಿರಿಯ ವೈದ್ಯರಾದ ಡಾ. ಜಿ.ಎಸ್. ಹಿರೇಮಠ ಮಾತನಾಡುತ್ತ, ಕೇವಲ ರೋಗ ಬಂದಾಗ ಔಷಧಿ ಪಡೆಯುವುದು ಚಿಕಿತ್ಸೆಯಲ್ಲ, ರೋಗ ಬರದಂತೆ ತಡೆಯುವ ಜೀವನ ಶೈಲಿಯನ್ನು ರೂಢಿಸಿಕೊಳ್ಳಬೇಕಾದುದು ಇಂದಿನ ಅಗತ್ಯವಾಗಿದೆ. ವೈದ್ಯಕೀಯ ಕ್ಷೇತ್ರದಲ್ಲಿ ಸಾಕಷ್ಟು ಆವಿಷ್ಕಾರಗಳಾಗಿವೆ. ಆದರೆ ಜೀವನ ಶೈಲಿಯಲ್ಲಿಯೂ ವ್ಯತ್ಯಾಸವಾಗಿದೆ. ಹೀಗಾಗಿ ವಯಸ್ಕರಲ್ಲಿಯೂ ಇಂದು ಹೃದಯಾಘಾತವಾಗುತ್ತಿದೆ. ಸಾರ್ವಜನಿಕರು ಆಯುರ್ವೇದದಲ್ಲಿ ಹೇಳಿದ ದಿನಚರಿ, ಋತುಚರಿಗಳನ್ನು ಆಚರಿಸಿಕೊಳ್ಳಬೇಕಾದ ಅಗತ್ಯತೆ ಇದೆ ಎಂದರು.

**■ ವಿಜಯಸಾಕ್ಷಿ ಸುದ್ದಿ, ಗದಗ**

ಸಮಾಜವು ಋಣಿಯಾದ ವೈದ್ಯಕೀಯ ಸೇವೆಯನ್ನು ಸಮಾಜವು ಗೌರವಿಸುತ್ತದೆ. ನಾಡಿನ ಅನೇಕ ವೈದ್ಯರು ದಯೆ, ಕರುಣೆ, ನಿಸ್ವಾರ್ಥದಿಂದ ಸೇವೆ ಮಾಡುತ್ತಿದ್ದಾರೆ. ಅಂತಹ ವೈದ್ಯರುಗಳನ್ನು ಗುರುತಿಸಿ ಅಭಿನಂದಿಸಬೇಕು ಎಂದು ಹಿರಿಯ ವೈದ್ಯರಾದ ಡಾ. ಜಿ. ಬಿ. ಪಾಟೀಲ ನುಡಿದರು.

ಗದುಗಿನ ಡಾ. ಪುರದ ಪ್ರತಿಷ್ಠಾನ ಹಾಗೂ ಪುರದ ಇನ್‌ಸ್ಟಿಟ್ಯೂಟ್ ಆಫ್ ನರ್ಸಿಂಗ್‌ನ ಸಹಯೋಗದಲ್ಲಿ ಜರುಗಿದ ರಾಷ್ಟ್ರೀಯ ವೈದ್ಯರ ದಿನಾಚರಣೆಯ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡುತ್ತಿದ್ದರು.

ಕೊರೋನಾ ಸಾಂಕ್ರಾಮಿಕದ ಸಂದರ್ಭದಲ್ಲಿ ಜೀವದ ಹಂಗು ತೊ-ರೆದು ಸೇವೆ ಮಾಡಿದ ವೈದ್ಯಕೀಯ ಕ್ಷೇತ್ರದ ಎಲ್ಲರ ಕಾರ್ಯವನ್ನು ಮರೆಯಲಾಗದು. ಇಂದು ಎಲ್ಲವೂ ವ್ಯಾವಹಾರಿಕವಾಗಿದೆ. ಆಧುನಿಕ, ಆವಿಷ್ಕಾರಿತ ವೈದ್ಯಕೀಯ ಕ್ಷೇತ್ರವು ಇದಕ್ಕೆ ಹೊರತಲ್ಲ. ವೈದ್ಯರುಗಳು ರೋಗದ ಅವಸ್ಥೆಗಳಿಗೆ ತಕ್ಕಂತೆ ಚಿಕಿತ್ಸೆ ಮಾಡುತ್ತಾರೆ. ಕೆಲವೊಮ್ಮೆ ರೋಗ ಹತೋಟಿಯಾಗಲಾರದೇ ರೋಗ ಉಲ್ಬಣಿಸಬಹುದು ಮತ್ತು ಕೆಲವೊಮ್ಮೆ ಚಿಕಿತ್ಸೆ ನಿಷ್ಫಲವಾಗಬಹುದು. ಆದರೆ ವೈದ್ಯರಲ್ಲಿ ವಿಶ್ವಾಸವಿಟ್ಟು ಚಿಕಿತ್ಸೆ ಪಡೆಯಬೇಕೆಂದರು.

ಇನ್ನೋರ್ವ ವೈದ್ಯರಾದ ಡಾ. ವಿ.ಎಸ್. ಆಡೂರ ಮಾತನಾಡಿ, ವೈದ್ಯರನ್ನು ದೇವರೆಂದು ಗೌರವಿಸುವ ಸಮಾಜಕ್ಕೆ ನಾವು ಋಣಿಯಾಗಿದ್ದೇವೆ. ವೈದ್ಯರೊಂದಿಗೆ ಸಹ ಸಿಬ್ಬಂದಿಗಳ ಸಹಕಾರ ಮತ್ತು ಸಮಯೋಚಿತ ಚಿಕಿತ್ಸೆ ಯಶಸ್ವಿಯಾಗುವಲ್ಲಿ ಪ್ರಧಾನ ಪಾತ್ರ ವಹಿಸುತ್ತದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಡಾ. ಉಮೇಶ ಪುರದ ಮಾತನಾಡುತ್ತ, ರೋಗಿಗಳ ವಿಶ್ವಾಸ ವೈದ್ಯರುಗಳಿಗೆ ಶಕ್ತಿ ತುಂಬುತ್ತವೆ. ದೀರ್ಘಕಾಲೀನ ರೋಗಗಳಲ್ಲಿ ಆಯುರ್ವೇದ ಚಿಕಿತ್ಸೆ ಪರಿಣಾಮಕಾರಿಯಾಗಿದೆ ಎಂದರು.

ವೈದ್ಯರುಗಳಾದ ಡಾ. ಜಿ.ಎಸ್. ಹಿರೇಮಠ ಮತ್ತು ಡಾ. ವಿ.ಎಸ್. ಆಡೂರ ಅವರನ್ನು ಇದೇ ಸಂದರ್ಭದಲ್ಲಿ ಸನ್ಮಾನಿಸಲಾಯಿತು.

ವೇದಿಕೆಯ ಮೇಲೆ ಪ್ರಾಚಾರ್ಯರಾದ ಸಿಬಿಲ್ ನಿಲೂಗಲ್, ಜಯಶ್ರೀ ಪುರದ ಉಪಸ್ಥಿತರಿದ್ದರು. ವೈದ್ಯರ ದಿನಾಚರಣೆ ಕುರಿತು ಸುಜಾತಾ, ರಾಜೇಶ್ವರಿ, ಪೂಜಾ ಮತ್ತು ಶಿಫಾ ಮಾತನಾಡಿದರು. ಸೌಮ್ಯ, ಪುಷ್ಪ, ಶ್ರೀದೇವಿ ಅವರಿಂದ ಪ್ರಾರ್ಥನೆ ಜರುಗಿತು. ಕರುಣಾ ಸ್ವಾಗತಿಸಿದರು. ರೂಪಾ ಕಾರ್ಯಕ್ರಮ ನಿರೂಪಿಸಿದರು. ಡಾ. ಶಂಭು ಪುರದ ಅತಿಥಿಗಳನ್ನು ಪರಿಚಯಿಸಿದರು. ಕೊನೆಯಲ್ಲಿ ಸಿದ್ದಮ್ಮ ವಂದಿಸಿದರು.

# ಕಲೆಯಲ್ಲಿಯೇ ಲಿಂಗ ಪೂಜೆಯನ್ನು ಕಾಣಬೇಕು




**■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪ್ರತಿಯೊಬ್ಬರೂ ತಮ್ಮ ಪಾಲಿನ ಕರ್ತವ್ಯವನ್ನು ಪ್ರಾಮಾಣಿಕತೆ, ನಿಷ್ಠೆಯಿಂದ ಮಾಡಿದಾಗ ಮಾತ್ರ ಅದಕ್ಕೆ ತಕ್ಕುದಾದ ಪ್ರತಿಫಲ, ಗೌರವ ಪುರಸ್ಕಾರಗಳು ತಾನಾಗಿಯೇ ಬರುತ್ತವೆ. ಅದಕ್ಕಾಗಿ ಅರ್ಜಿ ಹಾಕಬಾರದು ಎಂದು ರಂಗಭೂಮಿ ಕಲಾವಿದ ಬಸವರಾಜ ಬೆಂಗೇರಿ ಅಭಿಪ್ರಾಯಪಟ್ಟರು

ಅವರು ಕರ್ನಾಟಕ ರಾಜ್ಯ ನಿವೃತ್ತ ನೌಕರರ ಕ್ಷೇಮಾಬಿವೃದ್ಧಿ ಸಂಘದ ಕಚೇರಿಯಲ್ಲಿ ನಡೆದ ಸಭೆಯಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿದರು. ಕಲೆಯಲ್ಲಿಯೇ ಲಿಂಗ ಪೂಜೆಯನ್ನು ಕಾಣಬೇಕು. ಪ್ರಸ್ತುತ ದಿನಮಾನದಲ್ಲಿ ಫಕೀರೇಶ್ವರ ಮಹಾತ್ಮೆ ನಾಟಕ ಬಾಂಧವ್ಯದ ಸಂದೇಶವನ್ನು ಸಾರುವ ನಾಟಕವಾಗಿದೆ. ಈ ನಾಟಕದ ಸಂದೇಶ ಮನೆ ಮನೆಗೂ ತಲುಪುವ ಕೆಲಸ ಆಗಬೇಕು. ಅಂದಿನ ಕಾಲದಲ್ಲಿ 1400 ಪ್ರಯೋಗ ಕಂಡ ನಾಟಕ ಇದಾಗಿತ್ತು. ಇತ್ತೀಚಿನ ದಿನಮಾನಗಳಲ್ಲಿ ಜನರಿಗೆ ನಾಟಕದ ಅಭಿರುಚಿ ಕಡಿಮೆ ಆಗುತ್ತಿದೆ. ಹಾಗಿದ್ದರೂ ಜನರು ನಮ್ಮನ್ನು ಪ್ರೀತಿಯಿಂದ ಕಾಣುತ್ತಾರೆ. ಅದಕ್ಕಿಂತ ದೊಡ್ಡ ಪ್ರಶಸ್ತಿ ಇನ್ನೊಂದಿಲ್ಲ ಎಂದು ಹೇಳಿದರು.

ಸಾಹಿತಿ ಸಿ.ಜಿ. ಹಿರೇಮಠ ಮಾತನಾಡಿ, ನಾಡಿನ ಹೆಸರಾಂತ ಕಲಾವಿದ ಬಸವರಾಜ ಬೆಂಗೇರಿ ಅವರಿಗೆ ಸರಕಾರದಿಂದ ಮಾಶಾಸನ ಕೊಟ್ಟಿಲ್ಲ ಎಂಬುದು ದುರ್ದೈವದ ಸಂಗತಿ. ಆದಷ್ಟು ಬೇಗ ಇವರಿಗೆ ಮಾಶಾಸನ ಹಾಗೂ ರಾಜ್ಯೋತ್ಸವ ಪ್ರಶಸ್ತಿ ನೀಡಬೇಕು ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಬಿ.ಎಸ್. ಈಳಗೇರ ವಹಿಸಿದ್ದರು. ಈ ವೇಳೆ ಎಸ್.ಡಿ. ತಿರಕಪ್ಪನವರ, ಬಿ.ಎನ್. ರಾಟಿ, ಎಸ್.ಜಿ. ಮಾದಾಪುರಮಠ, ಎಂ.ಬಿ. ಶಿಗ್ಲಿ, ಎಂ.ಜಿ. ಯಲವಿಗಿ, ಅಶೋಕ ಗುಡಿಸಾಗರ, ಕೆ.ಓ. ಹುಲಿಕಟ್ಟಿ, ಎನ್.ಪಿ. ಪ್ಯಾಟಿಗೌಡ್ರ, ಎನ್.ಆರ್. ಸಾತಪುತೆ, ಎನ್.ಜಿ. ಮುಳುಗುಂದ, ಬಿ.ಎನ್. ಮೂಲಿಮನಿ, ವಿ.ಎಮ್. ಹೂಗಾರ, ಎಸ್.ವಿ. ಅಂಗಡಿ, ಆಯ್.ಎನ್. ಹುಬ್ಬಳ್ಳಿ, ಈರಣ್ಣ ಮಡಿವಾಳರ ಸೇರಿ ಸಂಘದ ಸದಸ್ಯರು ಇದ್ದರು.

# ಚುನಾವಣಾ ಕೆಲಸ ನೀಡದಂತೆ ಮನವಿ



**■ ವಿಜಯಸಾಕ್ಷಿ ಸುದ್ದಿ, ಗದಗ**

ಮತಗಟ್ಟೆ ಮಟ್ಟದ (ಬಿ.ಎಲ್.ಓ) ಚುನಾವಣಾ ಭಾಗದ ಕೆಲಸ ನೀಡದಂತೆ ಕರ್ನಾಟಕ ರಾಜ್ಯ ಅಂಗನವಾಡಿ ನೌಕರರ ಸಂಘ ಜಿಲ್ಲಾ ಸಮಿತಿ ಗದಗ ವತಿಯಿಂದ ಗದಗ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳ ಮೂಲಕ ಗದಗ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು.

ಸಿಐಟಿಯು ಮುಖಂಡ ಮಹೇಶ ಹಿರೇಮಠ ಮಾತನಾಡಿ, ಅಂಗನವಾಡಿ ನೌಕರರು ಬಿ.ಎಲ್.ಓ. ಕೆಲಸವನ್ನು ಮಾಡುತ್ತಾ ಬಂದಿದ್ದಾರೆ. ಆದರೆ ಈಗ ನಮ್ಮ ಇಲಾಖೆಯ ಕೆಲಸವನ್ನು ಹೊರತುಪಡಿಸಿ ಬೇರೆ ಇಲಾಖೆಯ ಕೆಲಸ ಮಾಡಬಾರದೆಂದು ಆದೇಶವಿದೆಯಲ್ಲದೆ, ಅಂಗನವಾಡಿ ಕೆಲಸಗಳೇ ಸಾಕಷ್ಟಿರುತ್ತವೆ. ಇದರ ನಡುವೆ ಬಿ.ಎಲ್.ಓ ಕೆಲಸ ಮಾಡಲು ಹೋದರೆ ಅಂಗನವಾಡಿ ಮಕ್ಕಳ ಶಾಲಾ ಪೂರ್ವ ಶಿಕ್ಷಣ ಕುಂಠಿತಗೊಳ್ಳುತ್ತದೆ ಎಂದು ಮನವಿ ಸಲ್ಲಿಸಿ ವಿನಂತಿಸಿಕೊಂಡರು.

ಈ ಸಂದರ್ಭದಲ್ಲಿ ಮಾರುತಿ ಚಿಟಗಿ, ಪೀರು ರಾಠೋಡ, ಅಧ್ಯಕ್ಷರಾದ ಸಾವಿತ್ರಿ ಸಬ್ನಿಸ್, ಶಾರದಾ ರೋಣದ, ಗಂಗಮ್ಮ ದೇವರಡ್ಡಿ, ಸುಶೀಲಾ ಚಲವಾದಿ, ಗಿರಿಜಾ ಮಾಚಕ್ಕನವರ, ಕವಿತಾ ಬಡಿಗೇರ, ನೀಲಮ್ಮ ಹಿರೇಮಠ, ಅನ್ನಪೂರ್ಣ ಸಾಲಿಮಠ, ಶಾರದಾ ಹಳೇಮನಿ, ಮಂಗಲಾ ಪಟ್ಟಣಶೆಟ್ಟಿ, ಕಮಲಾಕ್ಷಿ ಬೀಳಗಿ, ಗಂಗಮ್ಮ ಮಾದರ, ಜ್ಯೋತಿ, ಶರಣಮ್ಮ ವಾಲಿ ಉಪಸ್ಥಿತರಿದ್ದರು.

### ಶ್ರೀ ಅನ್ನದಾನೇಶ್ವರ ಪ.ಪೂ ಮಹಾವಿದ್ಯಾಲಯದ 'ಸಿಂಧೂರ-2025' ಕಾರ್ಯಕ್ರಮಕ್ಕೆ ಚಾಲನೆ

# ವಿದ್ಯಾರ್ಥಿ ಜೀವನ ಸುವರ್ಣ ಯುಗವಿದ್ದಂತೆ

**■ ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ**

ಮನುಷ್ಯನ ಬದುಕಿನಲ್ಲಿ ವಿದ್ಯಾರ್ಥಿ ಜೀವನ ಅಮೂಲ್ಯವಾಗಿದ್ದು, ವಿದ್ಯಾರ್ಥಿಗಳು ಗುರುಗಳು ತೋರಿಸುವ ಉತ್ತಮ ಮಾರ್ಗದಲ್ಲಿ ಸಾಗಬೇಕು ಹಾಗೂ ಚೆನ್ನಾಗಿ ವಿದ್ಯಾಭ್ಯಾಸ ಮಾಡಿ ಉತ್ತಮ ಭವಿಷ್ಯ ರೂಪಿಸಿಕೊಳ್ಳಬೇಕು ಎಂದು ನಿವೃತ್ತ ಪ್ರಾಚಾರ್ಯ ಬಿ.ಎಸ್. ಚೇಗರಡ್ಡಿ ಹೇಳಿದರು.

ಗಜೇಂದ್ರಗಡ ನಗರದ ಪುರ್ತಗೇರಿ ಕ್ರಾಸ್ ಬಳಿ ಇರುವ ಶ್ರೀ ಅನ್ನದಾನೇಶ್ವರ ಪದವಿಪೂರ್ವ ಮಹಾವಿದ್ಯಾಲಯದಲ್ಲಿ ಪ್ರಸಕ್ತ ಸಾಲಿನ ಪ್ರಥಮ ಪಿಯುಸಿ ವಿದ್ಯಾರ್ಥಿಗಳ ಸ್ವಾಗತ ಹಾಗೂ ವಿವಿಧ ಸಾಂಘಿಕ ಚಟುವಟಿಕೆಗಳ ಉದ್ಘಾಟನಾ ಸಮಾರಂಭದ ಅಂಗವಾಗಿ ನಡೆದ 'ಸಿಂಧೂರ-2025' ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.




ಸಮಾಜದಲ್ಲಿ ಮೌಲ್ಯಯುತ ಬದುಕನ್ನು ನಡೆಸುವಂತಾಗಲು ಶಿಕ್ಷಣ ಬಹುಮುಖ್ಯ ಪಾತ್ರ ವಹಿಸುತ್ತದೆ. ಅಂತಹ ಶಿಕ್ಷಣ ಪಡೆಯುವ ವಿದ್ಯಾರ್ಥಿ ಜೀವನ ಸುವರ್ಣಯುಗ ಇದ್ದಂತೆ. ಆದ್ದರಿಂದ ಈ ಸಮಯವನ್ನು ವ್ಯರ್ಥ ಮಾಡದೆ ಶಿಕ್ಷಣದೊಂದಿಗೆ ಸಂಸ್ಕಾರ ಹೊಂದಿ ತಂದೆ-ತಾಯಿಗೆ, ಗುರು-ಹಿರಿಯರಿಗೆ ಗೌರವ ನೀಡುವ ಮನೋಭಾವ ಬೆಳೆಸಿಕೊಳ್ಳಬೇಕು ಎಂದು ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ಅಧ್ಯಕ್ಷತೆ ವಹಿಸಿದ್ದ ಪಿಯು ಕಾಲೇಜಿನ ಚೇರಮನ್ ವೀರಯ್ಯ ವ್ಹಿ.ವಸ್ತ್ರದ ಮಾತನಾಡಿ, ಅಂಕಗಳಿಕೆ ಜೊತೆಗೆ ಮಕ್ಕಳಿಗೆ ಕೌಶಲ್ಯ, ಸಂವಹನ ಕಲೆ, ಕ್ರಿಡೆ ಹಾಗೂ ಸಾಂಘಿಕ ಚಟುವಟಿಕೆಗಳಲ್ಲಿ ತಮ್ಮ ಪ್ರತಿಭೆಯನ್ನು ವೃದ್ಧಿಸಲು ಒತ್ತು ಕೊಡಬೇಕು. ದಿನ ನಿತ್ಯದ ಅಭ್ಯಾಸದ ಜೊತೆಗೆ ಸ್ಪರ್ಧಾತ್ಮ ವಿಷಯಗಳ ಬಗ್ಗೆ ಓದಿದರೆ ಗೆಲುವು ನಿಶ್ಚಿತ ಎಂದರು.

ಅನ್ನದಾನ ವಿಜಯ ವಿದ್ಯಾ ಪ್ರಸಾರಕ ಸಮಿತಿಯ ಶೈಕ್ಷಣಿಕ ಸಲಹೆಗಾರ ಬಿ.ಎಸ್. ಗೌಡರ ಮಾತನಾಡಿ, ವಿದ್ಯಾರ್ಥಿಗಳು ಯಾವುದೇ ದುಶ್ಚಟಕ್ಕೆ ಬಲಿಯಾಗಿ ಜೀವನ ಹಾಳು ಮಾಡಿಕೊಳ್ಳಬಾರದು. ಉತ್ತಮ ಸ್ನೇಹಿತರನ್ನು ಸಂಪಾದಿಸಿ ಉತ್ತಮ ಹವ್ಯಾಸಗಳನ್ನು ಅಳವಡಿಸಿಕೊಳ್ಳಬೇಕು. ವಿದ್ಯಾರ್ಥಿ ಜೀವನದಲ್ಲಿ ಪುಸ್ತಕಗಳೇ ನಿಮ್ಮ ಸಹಪಾಠಿಗಳಾಗಿ ಇರಬೇಕು ಎಂದರು.

ಪಿಯು ಪ್ರಾಚಾರ್ಯ ವಸಂತರಾವ್ ಗಾರಗಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಈ ಸಂದರ್ಭದಲ್ಲಿ ಕಳೆದ ಸಾಲಿನ ದ್ವಿತೀಯ ಪಿಯು ಪರೀಕ್ಷೆಯಲ್ಲಿ ಸಾಧನೆ ಮಾಡಿದ ವಿದ್ಯಾರ್ಥಿಗಳನ್ನು, ಆಡಳಿತ ಮಂಡಳಿಯವರನ್ನು ಸನ್ಮಾನಿಸಲಾಯಿತು. ಆಡಳಿತ ಮಂಡಳಿ ಸದಸ್ಯರಾದ ಸದಾಶಿವ ಕರಡಿ, ಕಿವುಡ ಮತ್ತು ಮೂಕ ಮಕ್ಕಳ ವಸತಿಯುತ ಶಾಲೆಯ ಚೇರಮನ್ ಶರಣಪ್ಪ ಕೆ.ರೇವಡಿ, ಅನ್ನದಾನೇಶ್ವರ ಆಂಗ್ಲ ಮಾಧ್ಯಮ ಶಾಲೆಯ ಚೇರನ್ನರಾದ ಪ್ರಭು ಎನ್. ಚವಡಿ, ಐಟಿಐ ಪ್ರಾಚಾರ್ಯ ಎ.ಪಿ. ಗಾಣಗೇರ, ಪದವಿ ಪ್ರಾಚಾರ್ಯ ಬಸಯ್ಯ ಎಸ್.ಹಿರೇಮಠ, ಆಂಗ್ಲ ಮಾಧ್ಯಮ ಶಾಲೆಯ ಮುಖ್ಯ ಶಿಕ್ಷ ಮಂಜುನಾಥ ಕಾಡದ ಹಾಗೂ ಸಿಬ್ಬಂದಿಗಳು, ಪಾಲಕರು, ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

# ಮಾಸಾಶನಕ್ಕಾಗಿ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆ ವತಿಯಿಂದ 50 ವರ್ಷ ಮೇಲ್ಪಟ್ಟ ಕಷ್ಟ ಪರಿಸ್ಥಿತಿಯಲ್ಲಿರುವ ಮಾಜಿ ಕುಸ್ತಿಪಟುಗಳಿಗೆ ಹಾಗೂ ಕ್ರೀಡಾಪಟುಗಳಿಗೆ ಮಾಸಾಶನವನ್ನು ಮಂಜೂರು ಮಾಡುವ ಸಲುವಾಗಿ ಕ್ರೀಡಾಪಟುಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತರು ಸಹಾಯಕ ನಿರ್ದೇಶಕರ ಕಾರ್ಯಾಲಯ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಕೆ.ಎಚ್.ಪಾಟೀಲ ಜಿಲ್ಲಾ ಕ್ರೀಡಾಂಗಣ ಗದಗ ಇವರ ಕಾರ್ಯಾಲಯದಲ್ಲಿ ಅರ್ಜಿ ಪಡೆದುಕೊಂಡು ಮೂಲ ದಾಖಲಾತಿಗಳೊಂದಿಗೆ ಜುಲೈ 16 ರಂದು ಸಂಜೆ 5.30 ಗಂಟೆಯೊಳಗೆ ಭರ್ತಿ ಮಾಡಿ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ , ಗದಗ ಈ ಕಚೇರಿಯನ್ನು ಸಂಪರ್ಕಿಸಬಹುದಾಗಿದೆ.

# ಸಾರ್ವಜನಿಕರ ಗಮನಕ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯ ರೋಣ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿನ ಹಿರೇಹಾಳ ಹೊರ ಠಾಣೆಯ ಹಳೆಯ ಕಟ್ಟಡ ಮತ್ತು ಹೊಳೆ ಆಲೂರ ಹೊರ ಠಾಣೆಯಲ್ಲಿನ 4 ಪೊಲೀಸ್ ವಸತಿ ಗೃಹಗಳನ್ನು ನೆಲಸಮಗೊಳಿಸುವ ಮತ್ತು ಅವುಗಳಲ್ಲಿನ ಸಾಮಗ್ರಿಗಳ ಬಹಿರಂಗ ಹರಾಜು ಪ್ರಕ್ರಿಯೆಯನ್ನು ಜುಲೈ 10 ರಂದು ಬೆಳಿಗ್ಗೆ 11 ಗಂಟೆಗೆ ಗದಗ ಜಿಲ್ಲಾ ಪೊಲೀಸ್ ಕಚೇರಿಯ ಸಭಾಂಗಣದಲ್ಲಿ ನಿಗದಿಪಡಿಸಲಾಗಿದೆ. ಆಸಕ್ತರು ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಪೊಲೀಸ್ ಕಚೇರಿ, ಗದಗ ಇಲ್ಲಿ ಸಂಪರ್ಕಿಸಬಹುದಾಗಿದೆ.

### ನರಗುಂದ ತಾಲೂಕಿನ ಹಾಲು ಉತ್ಪಾದಕರ ಸಹಕಾರ ಸಂಘಗಳ ಪದಾಧಿಕಾರಿಗಳಿಗೆ ವಿಶೇಷ ತರಬೇತಿ ಕಾರ್ಯಕ್ರಮ

# ಕೆ.ಎಂ.ಎಫ್ ಸಾಧನೆ ಜಾಗತಿಕ ಮಟ್ಟದಲ್ಲಿದೆ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಸಹಕಾರ ಇಲಾಖೆ, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ಬೆಂಗಳೂರು, ಗದಗ ಜಿಲ್ಲಾ ಸಹಕಾರ ಯೂನಿಯನ್ ಹಾಗೂ ಗದಗ ಕೆ.ಎಂ.ಎಫ್ ಧಾರವಾಡ ಇವರುಗಳ ಸಂಯುಕ್ತ ಆಶ್ರಯದಲ್ಲಿ ನರಗುಂದ ತಾಲೂಕಿನ ಹಾಲು ಉತ್ಪಾದಕರ ಸಹಕಾರ ಸಂಘಗಳ ಅಧ್ಯಕ್ಷರು, ಉಪಾಧ್ಯಕ್ಷರು, ಮುಖ್ಯ ಕಾರ್ಯನಿರ್ವಾಹಕರು ಹಾಗೂ ಹಾಲು ಪರೀಕ್ಷಕರುಗಳಿಗೆ ವಿಶೇಷ ತರಬೇತಿ ಕಾರ್ಯಕ್ರಮವನ್ನು ಜುಲೈ 2ರಂದು ತಾಲೂಕು ಪಂಚಾಯಿತಿ ಸಭಾಭವನದಲ್ಲಿ ಆಯೋಜಿಸಲಾಗಿತ್ತು.



ಕರ್ನಾಟಕ ರಾಜ್ಯ ಸಹಕಾರಿ ಹಾಲು ಉತ್ಪಾದಕರ ಮಹಾಂಡಳದ ನಿರ್ದೇಶಕ ಎಚ್.ಜಿ. ಹಿರೇಗೌಡ್ರ ಮಾತನಾಡಿ, ಜಾಗತಿಕ ಆಹಾರವಾಗಿರುವ ಹಾಲು ಉತ್ಪಾದನೆ, ಶೇಖರಣೆ, ಸಂಸ್ಕರಣೆ, ಮಾರಾಟ ವ್ಯವಸ್ಥೆಗಳನ್ನು ವೈಜ್ಞಾನಿಕವಾಗಿ ನಿರ್ವಹಿಸುತ್ತಿರುವ ಹೈನೋದ್ಯಮದ ಕಾರ್ಯಚಟುವಟಿಕೆ ಗಳೊಂದಿಗೆ ಅದರ ಸಾಧನೆಗಳನ್ನು ವಿಶ್ವಕ್ಕೆ ತೋರಿಸುವ ಕನ್ನಡಿಯಂತೆ ಕೆ.ಎಂ.ಎಫ್ ಕಾರ್ಯನಿರ್ವಹಿಸುತ್ತಿದೆ. ಸಹಕಾರ ಸಂಘಗಳಿಗೆ, ಕಟ್ಟಡಕ್ಕಾಗಿ ಬಡ್ಡಿರಹಿತ ಸಾಲ, ಆಕಳು ಸಾಲದ ಮೊತ್ತ ಹೆಚ್ಚಿಸಿರುವುದು ಪ್ರಶಂಸಾರ್ಹವಾಗಿದೆ ಎಂದು ಹೇಳಿದರು.

ಧಾರವಾಡ ಹಾಲು ಒಕ್ಕೂಟದ ವ್ಯವಸ್ಥಾಪಕ ನಿರ್ದೇಶಕ ಡಿ.ಟಿ. ಕಳಸದ ಮಾತನಾಡುತ್ತಾ, ಗ್ರಾಮೀಣ ಪ್ರದೇಶದಲ್ಲಿಯೂ ಇಂದು ಆಧುನಿಕ ತಂತ್ರಜ್ಞಾನವನ್ನು ಎಲ್ಲಾ ಹಂತಗಳಲ್ಲಿ ಅಳವಡಿಸಿಕೊಳ್ಳುತ್ತಿದ್ದು, ತಳಿ ಅಭಿವೃದ್ಧಿ, ಹಸಿರು ಮೇವು ಮತ್ತು ಸಮತೋಲಿತ ಪಶು ಆಹಾರ ಉತ್ಪಾದನೆ, ಪಶು ವೈದ್ಯಕೀಯ ಸೇವೆ, ಹಾಲು ಶೇಖರಣೆ ಹೀಗೆ ಎಲ್ಲಾ ಹಂತಗಳಲ್ಲಿ ಆಧುನಿಕ ತಂತ್ರಜ್ಞಾನದ ಉಪಯೋಗವನ್ನು ವಿಸ್ತರಿಸಿಕೊಳ್ಳಲಾಗಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಗದಗ ಜಿಲ್ಲಾ ಸಹಕಾರ ಯೂನಿಯನ್ ಉಪಾಧ್ಯಕ್ಷ ವಾಯ್. ಎಫ್. ಪಾಟೀಲ ಮಾತನಾಡಿ, ವಿಶ್ವವನ್ನು ಸುಲಲಿತ ಮತ್ತು ಸುಲಭ ಕಾರ್ಯನಿರ್ವಹಣೆಯತ್ತ ಕರೆದೊಯ್ಯುತ್ತಿರುವ ಡಿಜಿಟಲ್ ತಂತ್ರಜ್ಞಾನವು ಇತರೆ ಕ್ಷೇತ್ರಗಳಂತೆಯೇ ಹೈನೋದ್ಯಮ ಕ್ಷೇತ್ರಕ್ಕೂ ವರವಾಗಿ ಪರಿಣಮಿಸಿದೆ. ರೈತರು ಉತ್ಪಾದಿಸುವ ಹಾಲಿನ ಪರೀಕ್ಷೆ, ದಾಖಲೆ ಸಂಗ್ರಹದಿಂದ ಆರಂಭವಾಗಿ ರೈತರಿಗೆ ಹಣ ಪಾವತಿ, ಹಾಲು ಮತ್ತು ಹಾಲಿನ ಉತ್ಪನ್ನಗಳನ್ನು ಅಂತಿಮ ಗ್ರಾಹಕರಿಗೆ ಮಾರಾಟ ಮಾಡುವ ಪ್ರಕ್ರಿಯೆವರೆಗೆ ಈ ಡಿಜಿಟಲ್ ತಂತ್ರಜ್ಞಾನದ ಕಾರ್ಯಚಟುವಟಿಕೆ ವಿಸ್ತರಿಸಿಕೊಂಡಿದೆ ಎಂದರು.

> ತರಬೇತಿ ಕಾರ್ಯಾಗಾರದಲ್ಲಿ ಮಾರುಕಟ್ಟೆಯ ಮೇಲೆ ಹಾಲಿನ ಗುಣಮಟ್ಟ ಪ್ರಭಾವ ಕುರಿತು ಧಾರವಾಡ ಹಾಲು ಒಕ್ಕೂಟದ ನಿವೃತ್ತ ವ್ಯವಸ್ಥಾಪಕ ನಿರ್ದೇಶಕ ಡಾ. ವೀರೇಶ ತರಲಿ, ಶುದ್ಧ ಹಾಗೂ ಅಧಿಕ ಹಾಲು ಉತ್ಪಾದನೆ ಮತ್ತು ಅಗೋಚರ ಕೆಚ್ಚಲುಬಾವು ಕುರಿತು ಕ.ಹಾ.ಮ. ತರಬೇತಿ ಕೇಂದ್ರದ ನಿವೃತ್ತ ಜಂಟಿ ನಿರ್ದೇಶಕ ಡಾ. ಎಂ.ಬಿ. ಮಡಿವಾಳರ, ಸಹಕಾರ ಸಂಘಗಳಲ್ಲಿ ಲೆಕ್ಕಪತ್ರಗಳ ನಿರ್ವಹಣೆ ಕುರಿತು ಧಾರವಾಡ ಹಾಲು ಒಕ್ಕೂಟದ ನಿವೃತ್ತ ಸಹಾಯಕ ವ್ಯವಸ್ಥಾಪಕ ಎಂ.ಬಿ. ಪಾಟೀಲ ಉಪನ್ಯಾಸ ನಿಡಿದರು.

ಸಹಕಾರ ಸಂಘಗಳ ಉಪನಿಬಂಧಕಿ ಎಸ್.ಎಸ್. ಕಬಾಡೆ, ಸಹಕಾರ ಸಂಘಗಳ ಸಹಾಯಕ ನಿಬಂಧಕಿ ಪುಷ್ಪಾ ಕೆ.ಕಡಿವಾಳ, ನರಗುಂದ ತಾಲೂಕಿನ ಸಹಕಾರ ಅಭಿವೃದ್ಧಿ ಅಧಿಕಾರಿ ಪ್ರಕಾಶ ನವಲಗುಂದ, ಧಾರವಾಡ ಹಾಲು ಒಕ್ಕೂಟದ ಜಿಲ್ಲಾ ಮುಖ್ಯಸ್ಥ ಪ್ರಸನ್ನ ಪಟ್ಟೇದ, ನರಗುಂದ ತಾಲೂಕಿನ ವಿಸ್ತರಣಾಧಿಕಾರಿ ದಿಲೀಪ್ ಆಯ್.ನದಾಫ್ ಉಪಸ್ಥಿತರಿದ್ದರು.

ಹುಣಸಿಕಟ್ಟಿ ಹಾಲು ಉತ್ಪಾದಕರ ಸಹಕಾರ ಸಂಘದ ಕಾರ್ಯದರ್ಶಿ ಎಸ್. ಎಸ್. ಹುಚ್ಚನಗೌಡ್ರ ಪ್ರಾರ್ಥಿಸಿದರು. ಗದಗ ಜಿಲ್ಲಾ ಸಹಕಾರ ಯೂನಿಯನ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಚಂದ್ರಶೇಖರ ಎಸ್.ಕರಿಯಪ್ಪನವರ ಸ್ವಾಗತಿಸಿ ನಿರೂಪಿಸಿದರು. ವಿಸ್ತರಣಾಧಿಕಾರಿ ದಿಲೀಪ್ ಆಯ್.ನದಾಫ್ ವಂದಿಸಿದರು.

# ಮಾಧ್ಯಮ ಹಬ್ಬದಲ್ಲಿ 'ಸಮಗ್ರ ಚಾಂಪಿಯನ್'



■ ವಿಜಯಸಾಕ್ಷಿ ಸುದ್ದಿ, ವಿಜಯಪುರ

ತುಮಕೂರು ವಿಶ್ವ ವಿದ್ಯಾನಿಲಯದ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗ ಹಾಗೂ ವಿ.ವಿ ಕಲಾ ಕಾಲೇಜಿನ ಪತ್ರಿಕೋದ್ಯಮ ವಿಭಾಗ ಜಂಟಿಯಾಗಿ ಹಮ್ಮಿಕೊಂಡಿದ್ದ 'ಇಂಪ್ರೆಶನ್-2025' ಮಾಧ್ಯಮ ಹಬ್ಬದಲ್ಲಿ ಮಹಿಳಾ ವಿವಿಯ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದ ವಿದ್ಯಾರ್ಥಿನಿಯರು 'ಸಮಗ್ರ ಚಾಂಪಿಯನ್‌ಶಿಪ್' ಗಳಿಸಿದ್ದಾರೆ.

ತುಮಕೂರಿನಲ್ಲಿ ಎರಡು ದಿನಗಳ ಕಾಲ ನಡೆದ 'ಇಂಪ್ರೆಶನ್-2025' ಮಾಧ್ಯಮ ಹಬ್ಬದಲ್ಲಿ ಮಾಧ್ಯಮಕ್ಕೆ ಸಂಬಂಧಿಸಿದ ಹಲವಾರು ಸ್ಪರ್ಧೆಗಳನ್ನು ಏರ್ಪಡಿಸಲಾಗಿತ್ತು. ರಾಜ್ಯದ ವಿವಿಧ ವಿಶ್ವವಿದ್ಯಾಲಯ ಮತ್ತು ಕಾಲೇಜುಗಳ 30ಕ್ಕೂ ಹೆಚ್ಚು ತಂಡಗಳು ಈ ಸ್ಪರ್ಧೆಗಳಲ್ಲಿ ಭಾಗವಹಿಸಿದ್ದವು.

ಜ್ಯೋತಿ ಎಸ್- ಟಿವಿ ಸುದ್ದಿ ನಿರೂಪಣೆ (ಪ್ರಥಮ), ಶಿಲ್ಪಾ ಪವಾರ- ಪುಟ್ಟಕತೆ (ಪ್ರಥಮ), ಅಸ್ಮಾ ಪಲ್ಟನ್- ರೀಲ್ಸ್ ನಿರ್ಮಾಣ (ಪ್ರಥಮ), ಜ್ಯೋತಿ ಎಸ್-ಪಿಟಿಸಿ (ತೃತೀಯ), ಭಸಮ್ಮಾ ಹಾಗೂ ಜ್ಯೋತಿ ಎಸ್ ಚರ್ಚಾ ಸ್ಪರ್ಧೆ (ದ್ವಿತೀಯ), ಮೇಘಪುಷ್ಪಾ, ವಿದ್ಯಾಶ್ರೀ, ಅನ್ನಪೂರ್ಣಾ, ರಾಜೇಶ್ವರಿ ಹಾಗೂ ರತ್ನಾಂಜಲಿ ಜಾಹೀರಾತು ನಿರ್ಮಾಣದಲ್ಲಿ (ತೃತೀಯ) ಸ್ಥಾನ ಪಡೆದಿದ್ದಾರೆ. ಸಮಗ್ರ ಚಾಂಪಿಯನ್ ಗಳಿಸಿರುವ ವಿದ್ಯಾರ್ಥಿನಿಯರನ್ನು ಹಂಗಾಮಿ ಕುಲಪತಿ ಪ್ರೊ. ನಾಮದೇವಗೌಡ, ಕುಲಸಚಿವ ಶಂಕರಗೌಡ ಸೋಮನಾಳ ಹಾಗೂ ಮೌಲ್ಯಮಾಪನ ಕುಲಸಚಿವ ಪ್ರೊ. ಚಂದ್ರಶೇಖರ, ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದ ಮುಖ್ಯಸ್ಥ ಪ್ರೊ. ಓಂಕಾರ ಕಾಕಡೆ ಅಭಿನಂದಿಸಿದ್ದಾರೆ.

ಈ ವಿದ್ಯಾರ್ಥಿನಿಯರ ತಂಡದೊಂದಿಗೆ ಸಹಾಯಕ ಪ್ರಾಧ್ಯಾಪಕರಾದ ಡಾ. ತಹಮೀನಾ ನಿಗಾರ ಸುಲ್ತಾನಾ, ಸಂದೀಪ್, ಅತಿಥಿ ಉಪನ್ಯಾಸಕರಾದ ಸುಷ್ಮಾ ಪವಾರ, ಫಿಲೋಮಿನಾ ಮತ್ತು ಪವಿತ್ರಾ ಕಂಬಾರ ಇದ್ದರು.

### ಸೇವಾ ನಿವೃತ್ತಿ ಸಮಾರಂಭದಲ್ಲಿ ಪ್ರೊ. ಪ್ರಕಾಶ ಹೊಸಮನಿ

# ನಿವೃತ್ತಿ ಜೀವನ ಸಮಾಜಮುಖಿ ಚಿಂತನೆಗೆ ಮೀಸಲು

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ನನ್ನ ಸೇವಾವಧಿಯಲ್ಲಿ ಎಲ್ಲ ಕಾಲೇಜುಗಳ ಪ್ರಾಂಶುಪಾಲರ, ಸಿಬ್ಬಂದಿಗಳ ಸಹಕಾರದಿಂದ ನಿರ್ವಹಿಸಿದ ಹುದ್ದೆ ಖುಷಿ ನೀಡಿದೆ. ಪ್ರಾಧ್ಯಾಪಕನಾಗಿದ್ದಾಗ ಮಕ್ಕಳ ಜೊತೆಗೆ ಪಡೆದ ವೃತ್ತಿ ಅನುಭವವನ್ನು ಎಂದೂ ಮರೆಯಲು ಸಾಧ್ಯವಿಲ್ಲ. ಆದ್ದರಿಂದ ನಿವೃತ್ತಿ ಜೀವನವನ್ನು ಸಮಾಜಮುಖಿ ಚಿಂತನೆಗಳಲ್ಲಿ ತೊಡಗಿಸಿಕೊಳ್ಳುವೆ ಎಂದು ಕಾಲೇಜು ಶಿಕ್ಷಣ ಇಲಾಖೆಯ ಧಾರವಾಡ ಪ್ರಾದೇಶಿಕ ಕೇಂದ್ರದ ಜಂಟಿ ನಿರ್ದೇಶಕ ಪ್ರೊ. ಪ್ರಕಾಶ ಹೊಸಮನಿ ಹೇಳಿದರು.



ಪಟ್ಟಣದ ಮರಿಯಪ್ಪ ಬಾಳಪ್ಪ ಕಳಕೊಣ್ಣವರ ಸರ್ಕಾರಿ ಪ್ರಥಮದರ್ಜೆ ಮಹಾವಿದ್ಯಾಲಯದಲ್ಲಿ ಸೋಮವಾರ ಆಯೋಜನೆ ಮಾಡಲಾಗಿದ್ದ ಅವರ ಸೇವಾ ನಿವೃತ್ತಿ ಸಮಾರಂಭದಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿದರು.

ಗ್ರಾಮೀಣ ಪ್ರದೇಶದ ಕಾಲೇಜುಗಳಲ್ಲಿ ಹೆಚ್ಚಿನ ಕಾಲ ಬೋಧಕನಾಗಿ, ಪ್ರಾಂಶುಪಾಲನಾಗಿ ಪಡೆದ ಅನುಭವಕ್ಕೆ ಬೆಲೆ ಕಟ್ಟಲು ಸಾಧ್ಯವಿಲ್ಲ. ಸದೃಢ ಸಮಾಜ ನಿರ್ಮಾಣದಲ್ಲಿ ಶಿಕ್ಷಕರ ಹಾಗೂ ಪದವಿ ಹಂತದ ವಿದ್ಯಾರ್ಥಿಗಳ ಪಾತ್ರ ಮಹತ್ವದ್ದಾಗಿದೆ. ಅಂತಹ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿ, ಪ್ರಾದೇಶಿಕ ಕೇಂದ್ರದ ಜಂಟಿ ನಿರ್ದೇಶಕನಾಗಿ ನಿವೃತ್ತಿ ಪಡೆಯುತ್ತಿರುವುದು ನನ್ನ ಸೇವೆಯಲ್ಲಿ ಸ್ಮರಣೀಯ ದಿನಗಳಾಗಿವೆ. ನಿವೃತ್ತಿಯ ಕೊನೆಯ ದಿನದವರೆಗೂ ಸರ್ಕಾರಿ ಕೆಲಸ ದೇವರ ಕೆಲಸ ಎಂದು ನಂಬಿ ಸೇವೆ ಮಾಡಿರುವೆ. ಸೇವಾ ದಿನಗಳಲ್ಲಿ ಮಾಡಿದ ಕೆಲಸ ಆತ್ಮತೃಪ್ತಿ ನೀಡಿದೆ ಎಂದು ಹೇಳಿ ತಮ್ಮ ಸೇವೆಯ ದಿನಗಳನ್ನು ಸ್ಮರಿಸಿಕೊಂಡರು.

> ನರೇಗಲ್ಲ ಕಾಲೇಜಿನ ಪ್ರಾಂಶುಪಾಲ ಎಸ್.ಎಲ್. ಗುಳೇದಗುಡ್ಡ ಮಾತನಾಡಿ, ಹೊಸಮನಿಯವರು ಕಾಲೇಜಿಗೆ ಬರುವ ಎಲ್ಲರೊಂದಿಗೂ ಆತ್ಮೀಯತೆಯಿಂದ ಬೆರೆಯುತ್ತಿದ್ದರು. ನಮ್ಮ ಕಾಲೇಜಿನ ಮೇಲೆ ಬಹಳಷ್ಟು ಪ್ರೀತಿಯನ್ನು ಹೊಂದಿದ್ದರು ಎಂದರು.

ನಿವೃತ್ತ ಪ್ರಾಂಶುಪಾಲ ಎಫ್.ಎಸ್. ಸಿದ್ನೇಕೊಪ್ಪ ಮಾತನಾಡಿದರು. ಈ ಸಂದರ್ಭದಲ್ಲಿ ಈ.ಆರ್. ಲಗಳೂರ, ಎಸ್.ಜಿ. ಕೇಶಣ್ಣವರ, ಆರ್.ಎಂ. ಕಲ್ಲನಗೌಡರ, ಡಿ.ಬಿ. ಗವಾನಿ, ಉಮೇಶ ಹಿರೇಮಠ, ಉಮೇಶ ಅರಹುಣಸಿ, ಕಮತಗಿ, ಆನಂದ ಲಾಲಸಿಂಗ್, ಕೃಷ್ಣಾ, ಬಿ.ಎಚ್. ಕೊಳ್ಳಿ, ಗಿರಿರಾಜ, ಶೋಭಾ ಮೆರವಾಡೆ, ಜ್ಯೋತಿ ಬೋಳಣ್ಣವರ, ಲಕ್ಷ್ಮೀ ನಾಗರಾಳ, ಧಾರವಾಡ, ಗದಗ, ಹಾವೇರಿ ಜಿಲ್ಲೆಯ ವಿವಿಧ ಕಾಲೇಜುಗಳ ಪ್ರಾಂಶುಪಾಲರು, ಪ್ರಾಧ್ಯಾಪಕರು ಪಾಲ್ಗೊಂಡಿದ್ದರು.

# ಪ್ರವೇಶಾತಿ ಆರಂಭ

■ ವಿಜಯಸಾಕ್ಷಿ ಸುದ್ದಿ, ಗದಗ

ಮೈಸೂರಿನ ಕರ್ನಾಟಕ ರಾಜ್ಯ ಮುಕ್ತ ವಿಶ್ವ ವಿದ್ಯಾನಿಲಯವು ಪ್ರಸಕ್ತ 2025-26ನೇ ಜುಲೈ ಆವೃತ್ತಿಯ ಶೈಕ್ಷಣಿಕ ಸಾಲಿಗೆ ಪ್ರವೇಶಾತಿಯ ಪ್ರಕ್ರಿಯೆ ಆರಂಭಿಸಿದೆ. ಸ್ನಾತಕ ಮತ್ತು ಸ್ನಾತಕೋತ್ತರ ಕೋರ್ಸ್‌ಗಳಾದ ಬಿ.ಎ, ಬಿ.ಕಾಂ, ಬಿ.ಲಿಬ್, ಬಿ.ಬಿ.ಎ, ಬಿ.ಸಿ.ಎ, ಬಿ.ಎಸ್.ಡಬ್ಲ್ಯೂ, ಎಂ.ಎ , ಎಂ.ಎ- ಪತ್ರಿಕೋದ್ಯಮ , ಎಂ.ಕಾಂ, ಎಂ.ಬಿ.ಎ, ಎಂ.ಲಿಬ್, ಎಂ.ಎಸ್ಸಿ, ಎಂ.ಸಿ.ಎ, ಎಂ.ಎಸ್. ಡಬ್ಲ್ಯೂ ಹಾಗೂ ಡಿಪ್ಲೋಮಾ ಮತ್ತು ಪಿ.ಜಿ.-ಸರ್ಟಿಫಿಕೇಟ್ ಕೋರ್ಸ್‌ಗಳಿಗೆ ಪ್ರಸಕ್ತ ಶೈಕ್ಷಣಿಕ ಸಾಲಿನ ಪ್ರವೇಶಾತಿ ಆರಂಭವಾಗಿದೆ.

ವಿದ್ಯಾರ್ಥಿಗಳು ಪ್ರಾದೇಶಿಕ ಕೇಂದ್ರಕ್ಕೆ ಖುದ್ದಾಗಿ ಭೇಟಿ ನೀಡಿ ಅಧಿಕೃತ ವೆಬ್‌ಸೈಟ್ www. ksoumysuru.ac.in KSOU Admission Portal ಮೂಲಕ ಪ್ರವೇಶಾತಿಯ ಅರ್ಜಿಯನ್ನು ಭರ್ತಿ ಮಾಡಿಸಿಕೊಂಡ ನಂತರ ಆನ್ ಲೈನ್ ಮುಖಾಂತರ ಪ್ರವೇಶಾತಿಯ ಶುಲ್ಕ ಪಾವತಿಸಿ ಪ್ರವೇಶಾತಿಯನ್ನು ಪಡೆಯಲು ಗದಗ ಪ್ರಾದೇಶಿಕ ನಿರ್ದೇಶಕರಾದ ಸಿದ್ಧಾರ್ಥ ಬಿ.ಎನ್. ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ, ಗದಗ ಪ್ರಾದೇಶಿಕ ಕೇಂದ್ರ, ಎಲ್.ಎಲ್. ಕಟ್ಟಡ, ಡಾ.ಪಂಡಿತ ಪುಟ್ಟರಾಜ ಕವಿ ಗವಾಯಿಗಳ ಖಾಸಗಿ ಕೈಗಾರಿಕಾ ತರಬೇತಿ ಸಂಸ್ಥೆಯ ಹತ್ತಿರ, ಜನರಲ್ ಕೆ.ಎಂ.ಕಾರ್ಯಪ್ಪ ವೃತ್ತ (ಹಳೆಯ ಡಿ.ಸಿ. ಕಚೇರಿ ವೃತ್ತ )ಗದಗ-582101 ಹಾಗೂ ಕಚೇರಿ ದೂರವಾಣಿ ಸಂಖ್ಯೆ 8884231002/8970555801/8549856177/ 9008459778/ 7259962717/7338103445 ಸಂಪರ್ಕಿಸಬಹುದಾಗಿದೆ.

# ಕರವೇ ಮಹಿಳಾ ತಾಲೂಕಾಧ್ಯಕ್ಷರ ನೇಮಕ

■ ವಿಜಯಸಾಕ್ಷಿ ಸುದ್ದಿ, ಗದಗ



ಕರ್ನಾಟಕ ರಕ್ಷಣಾ ವೇದಿಕೆ ಶಿರಹಟ್ಟಿ ಮಹಿಳಾ ಘಟಕದ ತಾಲೂಕು ಅಧ್ಯಕ್ಷರಾಗಿ ಯಶೋಧ ದೇವಪ್ಪ ಬಾಳೋಜಿ ಇವರನ್ನು ನೇಮಕ ಮಾಡಲಾಗಿದೆ. ಕರ್ನಾಟಕ ರಕ್ಷಣಾ ವೇದಿಕೆ ಶಿರಹಟ್ಟಿ ವಿಭಾಗದಲ್ಲಿ ಹಲವು ವರ್ಷಗಳಿಂದ ಸೇವೆ ಮಾಡಿರುವ ಇವರನ್ನು ಕರ್ನಾಟಕ ರಕ್ಷಣಾ ವೇದಿಕೆ ಗದಗ ಜಿಲ್ಲಾಧ್ಯಕ್ಷ ಹನಮಂತಪ್ಪ ಎಚ್.ಅಬ್ಬಿಗೇರಿ ಶಿರಹಟ್ಟಿ ಮಹಿಳಾ ಘಟಕದ ಅಧ್ಯಕ್ಷರನ್ನಾಗಿ ನೇಮಕ ಮಾಡಿ ಆದೇಶಿಸಿದ್ದಾರೆ.

# ವಚನ ಸಾಹಿತ್ಯದ ತತ್ವಗಳನ್ನು ಮೈಗೂಡಿಸಿಕೊಳ್ಳಿ

▶▶ ಮೊದಲನೇ ಪುಟದಿಂದ

ಸಂಪಾದನೆ ಜೊತೆಗೆ ವಚನ ಸಂಗ್ರಹವನ್ನು ಮಾಡಿ ಸರಕಾರ, ಯುಜಿಸಿ, ಸಾರ್ವಜನಿಕ ಸಂಸ್ಥೆಗಳ ನೆರವಿಲ್ಲದೆ ಹಲವಾರು ವಚನಕಾರರನ್ನು ಬೆಳಕಿಗೆ ತರುವಲ್ಲಿ ಅವರು ಮಾಡಿದ ಮಹತ್ಕಾರ್ಯ ಇತಿಹಾಸ ನೆನಪಿಡುವಂತದಾಗಿದೆ ಎಂದರು. ಕಾರ್ಯಕ್ರಮದಲ್ಲಿ ರಾಷ್ಟ್ರಪ್ರಶಸ್ತಿ ವಿಜೇತ ಶಿಕ್ಷಕ ಎಸ್.ಎನ್. ಬಳ್ಳಾರಿ, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ವಾರ್ತಾಧಿಕಾರಿ ವಸಂತ ಮಡ್ಲೂರ ಸೇರಿದಂತೆ ಗಣ್ಯರು ಹಾಜರಿದ್ದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ವೀರಯ್ಯ ಸ್ವಾಮಿ ಬಿ ಸ್ವಾಗತಿಸಿದರು. ಕಾರ್ಯಕ್ರದಲ್ಲಿ ಮೃತ್ಯುಂಜಯ ಹಿರೇಮಠ ಮತ್ತು ತಂಡದವರು ವಚನ ಸಂಗೀತ ಪ್ರಸ್ತುತಪಡಿಸಿದರು. ಪ್ರೊ. ಆರ್.ಬಿ. ಚಿನಿವಾಲರ ಕಾರ್ಯಕ್ರಮ ನಿರೂಪಿಸಿದರು.

# ಸಾರ್ವಜನಿಕರ ಗಮನಕ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ಪೊಲೀಸ್ ಇಲಾಖೆಯಿಂದ ಗದಗ ತಾಲೂಕು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಕುಂದು ಕೊರತೆ ಸಭೆಯನ್ನು ತಾಲೂಕು ಮಟ್ಟದ ಎಲ್ಲಾ ಅಧಿಕಾರಿಗಳ ಸಹಯೋಗದೊಂದಿಗೆ ಜುಲೈ 4 ರಂದು ಮುಂಜಾನೆ 11.00 ಗಂಟೆಗೆ ಪೊಲೀಸ್ ಭವನ ಜರುಗಲಿದೆ.

ಗದಗ ತಾಲೂಕು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಮುಖಂಡರು ಸಭೆಗೆ ಹಾಜರಾಗಲು ಸಮಾಜ ಕಲ್ಯಾಣ ಇಲಾಖೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### 'ಪಿ.ಎಂ ಕಿಸಾನ್ ಸಮ್ಮಾನ್' ಬಾಕಿ ಪ್ರಕರಣಗಳ ಪರಿಶೀಲನೆಗೆ ಕೇಂದ್ರ ಸರ್ಕಾರದ ಸೂಚನೆ

# ಈ-ಕೆವೈಸಿ ಪ್ರಕ್ರಿಯೆ ಪೂರ್ಣಗೊಳಿಸಿ



■ ವಿಜಯಸಾಕ್ಷಿ ಸುದ್ದಿ, ಗದಗ

ಭಾರತ ಸರ್ಕಾರದ ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆಯನ್ನು ದಿನಾಂಕ 1-12-2018ರಿಂದ ಅನ್ವಯವಾಗುವಂತೆ ಪೆಬ್ರುವರಿ 2019ರಿಂದ ರಾಜ್ಯದಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ. ಸಾಗುವಳಿ ಭೂಮಿ ಹೊಂದಿರುವ (01-02-2019 ರೊಳಗಾಗಿ ಸ್ವಾಧೀನದಲ್ಲಿರುವ / ಭೂದಾಖಲೆಯಲ್ಲಿ ಹೆಸರಿರುವ) ಎಲ್ಲಾ ಅರ್ಹ ರೈತ ಕುಟುಂಬಕ್ಕೆ ಕೃಷಿ ಚಟುವಟಿಕೆಯಲ್ಲಿ ಉತ್ತಮ ಪರಿಕರಗಳನ್ನು ಬಳಸಿ ಬೆಳೆಗಳ ಆರೋಗ್ಯ ನಿರ್ವಹಣೆ ಹಾಗೂ ಹೆಚ್ಚಿನ ಇಳುವರಿ ಪಡೆದು ನಿರೀಕ್ಷಿತ ಆದಾಯ ಗಳಿಸಲು ನೆರವಾಗಲು ವಾರ್ಷಿಕ 6000 ರೂಗಳ ಆರ್ಥಿಕ ನೆರವನ್ನು ನೀಡಲಾಗುತ್ತಿದೆ.

ಸದರಿ ಅನುದಾನವನ್ನು ರೂ.2000ನಂತೆ ಮೂರು ಕಂತುಗಳಲ್ಲಿ ನಾಲ್ಕು ತಿಂಗಳಿಗಳಿಗೊಮ್ಮೆ ನೀಡಲಾಗುತ್ತಿದೆ. ಪಿ.ಎಂ ಕಿಸಾನ್ ಯೋಜನೆಯ ವಿವಿಧ ಪ್ರಕರಣಗಳಲ್ಲಿ ರೈತರ ಪರಿಶೀಲನೆ ಅಥವಾ ಅವಶ್ಯಕ ಅನುಮೋದನಾ ಪ್ರಕ್ರಿಯೆಗಳು ಬಾಕಿ ಇರುವುದರಿಂದ ಆರ್ಥಿಕ ನೆರವು ಪಡೆಯುವುದರಿಂದ ಫಲಾನುಭವಿಗಳು ವಂಚಿತರಾಗಿರುತ್ತಾರೆ. ಅಂತಹ ಪ್ರಕರಣಗಳ ಪರಿಶೀಲನೆಯನ್ನು ಪೂರ್ಣಗೊಳಿಸಲು ಕೇಂದ್ರ ಸರ್ಕಾರವು ಸೂಚಿಸಿದೆ.

ಆದ್ದರಿಂದ ಪಿ.ಎಂ ಕಿಸಾನ್ ಯೋಜನೆಯಡಿ 20ನೇ ಕಂತಿನ ಆರ್ಥಿಕ ನೆರವು ವರ್ಗಾವಣೆ ಸಮಯಕ್ಕೆ ಫಲಾನುಭವಿಗಳ ಬಾಕಿ ಇರುವ ಪ್ರಕರಣಗಳನ್ನು ತೀರ್ಣಗೊಳಿಸುವುದು ಹಾಗೂ ಉಳಿದ ಅರ್ಹ ರೈತರನ್ನು ಯೋಜನೆಗೆ ನೋಂದಣಿ ಮಾಡುವುದು ಅವಶ್ಯಕವಾಗಿರುತ್ತದೆ. ಪಿ.ಎಂ ಕಿಸಾನ್ ಯೋಜನೆಯಡಿ ಜಿಲ್ಲೆಯಲ್ಲಿ (ಗದಗ-5164, ಮುಂಡರಗಿ-3652, ನರಗುಂದ-1431, ರೋಣ-5355, ಶಿರಹಟ್ಟಿ-3633, ಲಕ್ಷ್ಮೇಶ್ವರ-406, ಗಜೇಂದ್ರಗಡ-234) ಒಟ್ಟು 19875 ರೈತರ ಇ-ಕೆ.ವೈ.ಸಿ ಬಾಕಿ ಇರುತ್ತದೆ. ಇ-ಕೆವೈಸಿ ಕಡ್ಡಾಯವಾಗಿರುವುದರಿಂದ ಇ-ಕೆವೈಸಿ ಪ್ರಕ್ರಿಯೆಯನ್ನು ಪೂರ್ಣಗೊಳಿಸದ ರೈತರಿಗೆ ಯೋಜನೆಯಡಿ ಮುಂದಿನ ಕಂತಿನ ಮೊತ್ತ ವರ್ಗಾವಣೆಯಾಗುವುದಿಲ್ಲ.

> ಪಿ.ಎಂ ಕಿಸಾನ್ ಯೋಜನೆಯ ಮಾರ್ಗಸೂಚಿಯನ್ವಯ ಒಂದು ಕುಟುಂಬದಿಂದ ಅರ್ಹ ಕೃಷಿ ಭೂಮಿ ಹೊಂದಿರುವ ಗಂಡ ಅಥವಾ ಹೆಂಡತಿ ಯೋಜನೆಯ ಫಲಾನುಭವಿಯಾಗಲು ಅವಕಾಶವಿರುತ್ತದೆ. ಆದ್ದರಿಂದ ಒಂದೇ ಕುಟುಂಬದ ಇಬ್ಬರು ಸದಸ್ಯರು ಯೋಜನೆಯಲ್ಲಿ ಪ್ರಯೋಜನಗಳನ್ನು ಪಡೆಯುತ್ತಿಲ್ಲ ಎಂದು ಖಾತ್ರಿಪಡಿಸಿಕೊಳ್ಳಲು ಫಲಾನುಭವಿಗಳ ಕ್ಷೇತ್ರ ಮಟ್ಟದ ಪರಿಶೀಲನೆ ಕೈಗೊಳ್ಳಲಾಗುತ್ತಿದೆ. ಜಿಲ್ಲೆಯಲ್ಲಿ 9050 ಫಲಾನುಭವಿಗಳನ್ನು ಏಕ ಕುಟುಂಬದ ಸದಸ್ಯರೆಂದು ಗುರುತಿಸಿ ಪರಿಶೀಲನೆ ಹಂತದಲ್ಲಿ ಬಾಕಿ ಇಡಲಾಗಿದೆ.

ಯೋಜನೆಯಡಿ ಶೇ.100 ರಷ್ಟು ರೈತರ ಇ-ಕೆವೈಸಿ ಮಾಡಲೇಬೇಕಾಗಿರುವುದರಿಂದ ಇ-ಕೆವೈಸಿ ಮಾಡಿಸದ ರೈತರು ಕೂಡಲೇ ತಮ್ಮ ಸಮೀಪದ ರೈತ ಸಂಪರ್ಕ ಕೇಂದ್ರಕ್ಕೆ ಭೇಟಿ ನೀಡಿ ಇ-ಕೆವೈಸಿ ಪ್ರಕ್ರಿಯೆಯನ್ನು ಪೂರ್ಣಗೊಳಿಸಲು ಜಂಟಿಕೃಷಿ ನಿರ್ದೇಶಕರು ಸೂಚಿಸಿದ್ದಾರೆ.

ಒಂದೇ ಕುಟುಂಬದ ಇಬ್ಬರು ಯೋಜನೆಗೆ ಅರ್ಜಿ ಸಲ್ಲಿಸಿದ್ದಲ್ಲಿ ಒಬ್ಬರನ್ನು ಮಾತ್ರ ಪರಿಗಣಿಸುವಂತೆ ಸಮೀಪದ ರೈತ ಸಂಪರ್ಕ ಕೇಂದ್ರದಲ್ಲಿ ದೃಢೀಕರಣ ಸಲ್ಲಿಸಬೇಕಾಗಿದೆ. ಪಿ.ಎಂ ಕಿಸಾನ ಯೋಜನೆಯಡಿ ಬಾಕಿ ಇರುವಎಲ್ಲಾ ಪ್ರಕರಣಗಳನ್ನು ಪೂರ್ಣಗೊಳಿಸಲು ಜಿಲ್ಲೆಯ ಎಲ್ಲಾ ಗ್ರಾಮಗಳಲ್ಲಿ ಗ್ರಾಮ ನೋಡಲ್ ಅಧಿಕಾರಿಗಳನ್ನು ನೇಮಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ರೈತ ಸಂಪರ್ಕ ಕೇಂದ್ರ / ಸಹಾಯಕ ಕೃಷಿ ನಿರ್ದೇಶಕರ ಕಚೇರಿಗೆ ಭೇಟಿ ನೀಡುವಂತೆ ಜಂಟಿ ಕೃಷಿ ನಿರ್ದೇಶಕರು ವಿನಂತಿಸಿದ್ದಾರೆ.

# ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಗದಗ ವಿಭಾಗದ ವ್ಯಾಪ್ತಿಗೆ ಬರುವ ವಿಭಾಗೀಯ ಕಾರ್ಯಾಗಾರ ಹಾಗೂ ಗದಗ, ರೋಣ, ಲಕ್ಷ್ಮೇಶ್ವರ, ಶಿರಹಟ್ಟಿ ಘಟಕಗಳಲ್ಲಿ ಫಿಟ್ಟರ್, ಇಲೆಕ್ಟ್ರಿಶಿಯನ್, ವೃತ್ತಿಗಳಲ್ಲಿ ಅರ್ಹ ಅಭ್ಯರ್ಥಿಗಳಿಂದ ಒಂದು ವರ್ಷದ ಶಿಶಿಕ್ಷು ತರಬೇತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ಅಭ್ಯರ್ಥಿಗಳು www.apprentic es-hip india.gov.in ನಲ್ಲಿ ನೋಂದಣಿ ಮಾಡಿಕೊಂಡು ಸದರಿ ಪೋರ್ಟಲ್‌ನಿಂದ DIVISIONAL CONTROLLER NWKRTC GADAG DIVISION (ಇ04162900081) ಈ ವಿಳಾಸಕ್ಕೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿ ವಿಭಾಗೀಯ ಕಛೇರಿ, ವಾ.ಕ.ರ.ಸಾ.ಸಂಸ್ಥೆ ಗದಗ ವಿಭಾಗ ಇಲ್ಲಿ ಜುಲೈ 15ರಂದು ಬೆಳಿಗ್ಗೆ 10 ಗಂಟೆಗೆ ಕಛೇರಿ ವೇಳೆಯಲ್ಲಿ ಸೂಕ್ತ ದಾಖಲಾತಿಗಳೊಂದಿಗೆ ಸ್ವಂತ ಖರ್ಚಿನಲ್ಲಿ ನೇರ ಸಂದರ್ಶನಕ್ಕೆ ಹಾಜರಾಗಬೇಕು ಎಂದು ಗದಗ ವಿಭಾಗೀಯ ನಿಯಂತ್ರಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಇಂದಿನಿಂದ ಫುಟ್‌ಬಾಲ್ ತರಬೇತಿ

▶▶ ಮೊದಲನೇ ಪುಟದಿಂದ

ಇದರಲ್ಲಿ ಗದಗನಿಂದ 18, ಜತೆಗೆ ಮೈಸೂರು, ಬೆಳಗಾವಿ, ಧಾರವಾಡ ಜಿಲ್ಲೆಗಳಿಂದಲೂ ಹೆಸರು ನೋಂದಣಿಯಾಗಿದೆ. ಈ ತರಬೇತಿಗೆ ಕರ್ನಾಟಕ ಸ್ಟೇಟ್ ಫುಟ್‌ಬಾಲ್ ಅಸೋಸಿಯೇಶನ್ ಅಧ್ಯಕ್ಷ ಎನ್.ಎ. ಹ್ಯಾರಿಸ್ ಅವರೂ ಸಹ ಸಹಕಾರ ನೀಡಿದ್ದು, ಅವರಿಗೂ ಸಹ ಗದಗ ಜಿಲ್ಲಾ ಫುಟ್‌ಬಾಲ್ ಅಸೋಸಿಯೇಶನ್ ಅಭಿನಂದಿಸಲಿದೆ ಎಂದು ತಿಳಿಸಿದರು. ಆಲ್ ಇಂಡಿಯಾ ಫುಟ್‌ಬಾಲ್ ಫೆಡರೇಷನ್‌ನ 'ಡಿ' ಲೈಸೆನ್ಸ್ ಕೋರ್ಸ್ ಪೂರ್ಣಗೊಳಿಸಿರುವ ಫುಟ್‌ಬಾಲ್ ತರಬೇತುದಾರ ಶಶಿಕುಮಾರ ಮುಂಡರಗಿ ಮಾತನಾಡಿ, ಗದಗ ಜಿಲ್ಲೆ ಪ್ರತಿ ತಾಲೂಕು, ಹೋಬಳಿ ಮಟ್ಟದಲ್ಲೂ ಫುಟ್‌ಬಾಲ್ ಕ್ರೀಡಾಪಟುಗಳು ಇರಬೇಕು. ಆ ಮೂಲಕ ಗದಗ ಫುಟ್‌ಬಾಲ್ ಸಿಟಿಯಾಗಬೇಕು ಎಂಬ ಉದ್ದೇಶದಿಂದ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲರ ಆಸಕ್ತಿಯಿಂದಾಗಿ 'ಎಲೆವನ್ ಸೈಡ್' ಅಂತಾರಾಷ್ಟ್ರೀಯ ಗುಣಮಟ್ಟದ ಫುಟ್‌ಬಾಲ್ ಕ್ರೀಡಾಂಗಣ ಬರಲಿದೆ. ಇದಕ್ಕೆ ಪೂರಕವಾಗಿ ತರಬೇತುದಾರರ ಸಂಖ್ಯೆ ಹೆಚ್ಚಿ, ಫುಟ್‌ಬಾಲ್ ಕ್ರೀಡಾಪಟುಗಳು ಹೆಚ್ಚಾಗಿ, ಭಾರತ ತಂಡವೂ ಸೇರಿ ರಾಷ್ಟ್ರ ಹಾಗೂ ಅಂತಾರಾಷ್ಟ್ರ ಮಟ್ಟದಲ್ಲಿ ಗದಗ ಜಿಲ್ಲೆ ಪ್ರತಿನಿಧಿಸುವವರನ್ನು ಸಿದ್ಧಗೊಳಿಸಲಾಗುವುದು ಎಂದು ಹೇಳಿದರು. ಸುದ್ದಿಗೋಷ್ಠಿಯಲ್ಲಿ 'ಡಿ' ಲೈಸೆನ್ಸ್ ಕೋರ್ಸ್ ಪೂರ್ಣಗೊಳಿಸಿರುವ ಫುಟ್‌ಬಾಲ್ ತರಬೇತುದಾರ ಚಂದ್ರಶೇಖರ ಅಣ್ಣಿಗೇರಿ, ಓಂಕಾರ ಓದುಗೌಡರ, ರಮೇಶ ಕರಿಕಟ್ಟಿ, ಪೃಥ್ವಿ ಪರಾಪೂರ ಇದ್ದರು.

ರೋಣ ತಾಲೂಕಿನ ಸರ್ಕಾರಿ ಶಾಲೆಗಳಲ್ಲಿ 'ನಮ್ಮ ಶಾಲೆ ನಮ್ಮ ಜವಾಬ್ದಾರಿ' ಜಾಗೃತಿ ಕಾರ್ಯಕ್ರಮ

# ಸರ್ಕಾರಿ ಶಾಲೆಗಳ ಶಿಕ್ಷಣದಲ್ಲಿರಲಿ ವಿಶ್ವಾಸ



■ವಿಜಯಸಾಕ್ಷಿ ಸುದ್ದಿ, ರೋಣ

2025–26ನೇ ಶೈಕ್ಷಣಿಕ ಸಾಲಿನಲ್ಲಿ ರೋಣ ತಾಲೂಕಿನ ಸರ್ಕಾರಿ ಪ್ರಾಥಮಿಕ, ಪ್ರೌಢಶಾಲೆಗಳಲ್ಲಿ ವಿದ್ಯಾರ್ಥಿಗಳ ದಾಖಲಾತಿಯನ್ನು ಹೆಚ್ಚಿಸುವ ಗುರಿಯೊಂದಿಗೆ ಶಿಕ್ಷಣ ಇಲಾಖೆಯ 'ನಮ್ಮ ಶಾಲೆ ನಮ್ಮ ಜವಾಬ್ದಾರಿ' ಕಾರ್ಯಕ್ರಮವನ್ನು ಯಶಸ್ವಿಯಾಗಿ ಆಯೋಜಿಸಲು ರೂಪುರೇಷೆಯನ್ನು ಸಿದ್ಧಪಡಿಸಿದ್ದು, ಜುಲೈ ತಿಂಗಳನಿಂದ ಬಹುತೇಕ ಎಲ್ಲಾ ಶಾಲೆಗಳಲ್ಲಿ ಕಾರ್ಯಕ್ರಮ ಆರಂಭ ಮಾಡಲಾಗುತ್ತಿದೆ. ಈ ಕುರಿತು ಬುಧವಾರ ಪಟ್ಟಣದ ಸರ್ಕಾರಿ ಹೆಣ್ಣು ಮಕ್ಕಳ ಪ್ರಾಥಮಿಕ ಶಾಲೆಗೆ ಭೇಟಿ ನೀಡಿ ತಾ.ಪಂ ಕಾರ್ಯ ನಿರ್ವಾಹಕ ಅಧಿಕಾರಿ ಚಂದ್ರಶೇಖರ ಬಿ.ಕಂದಕೂರ ಮಾಹಿತಿ ನೀಡಿ, ಈ ಕಾರ್ಯಕ್ರಮವು ಸರ್ಕಾರಿ ಶಾಲೆಗಳಲ್ಲಿ ಗುಣಮಟ್ಟದ ಶಿಕ್ಷಣದ ಬಗ್ಗೆ, ಸರಕಾರ ನೀಡುತ್ತಿರುವ ಸೌಲಭ್ಯಗಳ ಬಗ್ಗೆ ಸಮುದಾಯದಲ್ಲಿ ಜಾಗೃತಿ ಮೂಡಿಸುವುದು, ವಿದ್ಯಾರ್ಥಿಗಳನ್ನು ಆತ್ಮವಿಶ್ವಾಸದಿಂದ ಶಾಲೆ–ಕಾಲೇಜುಗಳತ್ತ ಹೆಜ್ಜೆ ಇಡುವಂತೆ ಪ್ರೇರೇಪಿಸುವುದು ಮತ್ತು ಮಕ್ಕಳು ತರಗತಿಯಿಂದ ಹೊರಗುಳಿಯುವುದನ್ನು ತಡೆಗಟ್ಟುವ ಉದ್ದೇಶದಿಂದ ಸರ್ಕಾರ ಹಾಗೂ ಶಿಕ್ಷಣ ಇಲಾಖೆ ಈ ಕಾರ್ಯಕ್ರಮ ಸಿದ್ಧಪಡಿಸಿದೆ ಎಂದರು.

ಸರ್ಕಾರಿ ಶಾಲೆಗಳಲ್ಲಿ ಉಚಿತ ಶಿಕ್ಷಣ, ಕ್ಷೀರಭಾಗ್ಯ, ಮೊಟ್ಟೆ/ಬಾಳೆಹಣ್ಣು, ರಾಗಿಮಾಲ್ಟ್, ಮಧ್ಯಾಹ್ನದ ಬಿಸಿಯೂಟದಂತಹ ಯೋಜನೆಗಳ ಮೂಲಕ ಮಕ್ಕಳಲ್ಲಿರುವ ಅಪೌಷ್ಟಿಕತೆ ಮತ್ತು ರಕ್ತಹೀನತೆಯನ್ನು ನಿವಾರಿಸುವದು, ಕ್ರೀಡೆ ಮತ್ತು ಶೌಚಾಲಯ, ಕುಡಿಯುವ ನೀರು ಇನ್ನಿತರ ಹಲವಾರು ಯೋಜನೆಗಳ ಕುರಿತು ಪೋಷಕರಲ್ಲಿ ಜಾಗೃತಿ ಮೂಡಿಸುವುದು, ಆಧುನಿಕ ಕಲಿಕಾ ಸೌಲಭ್ಯಗಳಾದ ಸ್ಮಾರ್ಟ್ ಕ್ಲಾಸ್, ಡಿಜಿಟಲ್ ಲೈಬ್ರರಿ, ಗುಣಮಟ್ಟದ ಶಿಕ್ಷಕರು ಮತ್ತು ಶೈಕ್ಷಣಿಕ ಪ್ರೋತ್ಸಾಹಕ ಯೋಜನೆಗಳ ಕುರಿತು ಮಾಹಿತಿ ಹಂಚುವುದು, ದಾಖಲಾದ ವಿದ್ಯಾರ್ಥಿಗಳು ನಿಯಮಿತವಾಗಿ ತರಗತಿಗಳಿಗೆ ಹಾಜರಾಗಿ ಕಲಿಕೆಯಲ್ಲಿ ಸಕ್ರಿಯವಾಗಿ ಭಾಗವಹಿಸುವಂತೆ ಖಾತರಿಪಡಿಸುವ ಯೋಜನೆ ಇದಾಗಿದೆ.

ಈ ಶೈಕ್ಷಣಿಕ ಸಾಲಿನಿಂದ ಆರಂಭವಾದ ಈ ಕಾರ್ಯಕ್ರಮವು ಈಗ ಮುಂದುವರಿದ ರೂಪದಲ್ಲಿ ಸಮುದಾಯದಲ್ಲಿ ಶಿಕ್ಷಣದ ಜಾಗೃತಿಯನ್ನು ತರುತ್ತಿದೆ. ಹಳೆಯ ವಿದ್ಯಾರ್ಥಿಗಳಲ್ಲಿ ತಾವು ಓದಿದ ಶಾಲೆ–ಕಾಲೇಜುಗಳ ಬಗ್ಗೆ ಅಭಿಮಾನ ಮೂಡಿಸುವ ಜೊತೆಗೆ, ಅವರಿಂದ ಶಾಲೆಯ ಅಭಿವೃದ್ಧಿಗೆ ಕೊಡುಗೆಗಳನ್ನು ಪಡೆಯುವುದು ಮತ್ತು ಪೋಷಕರಲ್ಲಿ ಸರ್ಕಾರಿ ಶಾಲೆಗಳ ಗುಣಮಟ್ಟದ ಶಿಕ್ಷಣದ ಕುರಿತು ವಿಶ್ವಾಸ ತುಂಬುವುದು ಈ ಕಾರ್ಯಕ್ರಮದ ಮುಖ್ಯ ಗುರಿಯಾಗಿದೆ.

– ಎಂ.ಎ. ಫನಿಭಂದ.
ಬಿಇಓ, ರೋಣ ತಾಲೂಕು.

ರೋಣ ತಾಲೂಕಿನ ಎಲ್ಲಾ ಗ್ರಾ.ಪಂ ವ್ಯಾಪ್ತಿಯ ಸರ್ಕಾರಿ ಶಾಲೆ–ಕಾಲೇಜುಗಳಲ್ಲಿ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ. ಈ ಕಾರ್ಯಕ್ರಮಗಳಲ್ಲಿ ಪಾಲಕರು, ಎಸ್‌ಡಿಎಂಸಿ ಅಧ್ಯಕ್ಷರು, ಸದಸ್ಯರು, ಬಿಸಿಯೂಟದ ಅಡುಗೆ ಸಿಬ್ಬಂದಿ, ಗ್ರಾ.ಪಂ/ವಾರ್ಡ್ ಸದಸ್ಯರು, ಹಳೆಯ ವಿದ್ಯಾರ್ಥಿಗಳು ಹಾಗೂ ಸಮೀಪದ ಶಾಲೆಗಳ ಮುಖ್ಯ ಶಿಕ್ಷಕರು, ಮತ್ತು ಉಪನ್ಯಾಸಕರು ಮತ್ತು ಎಲ್ಲಾ ಭಾಗಿದಾರರನ್ನು ಒಳಗೊಳಿಸಲಾಗುತ್ತಿದೆ. ಕಾರ್ಯಕ್ರಮದಲ್ಲಿ ಭಾಗವಹಿಸುವವರಿಗೆ ಸರ್ವೆ ಶೀಟ್‌ಗಳನ್ನು ನೀಡಿ, ಶಾಲೆ–ಕಾಲೇಜುಗಳ ಮೂಲ ಸೌಕರ್ಯ, ಶೈಕ್ಷಣಿಕ ಸೌಲಭ್ಯ, ಕಲಿಕೆಯ ಗುಣಮಟ್ಟ ಮತ್ತು ವಾತಾವರಣದ ಬಗ್ಗೆ ಅಭಿಪ್ರಾಯ ಸಂಗ್ರಹಿಸುವುದಲ್ಲದೆ ಸಂವಾದದ ಮೂಲಕ ಸಲಹೆಗಳನ್ನು ಸ್ವೀಕರಿಸಿ, ಶಾಲೆಗಳ ಅಭಿವೃದ್ಧಿಗೆ ಕ್ರಿಯಾ ಯೋಜನೆ ರೂಪಿಸಲಾಗುತ್ತಿದೆ.

ಈ ಕಾರ್ಯಕ್ರಮದ ಯಶಸ್ವಿ ಅನುಷ್ಠಾನಕ್ಕಾಗಿ ಶಿಕ್ಷಣ ಇಲಾಖೆಯ ರಾಜ್ಯಮಟ್ಟದ ನಿರ್ದೇಶಕರು, ಜಿಲ್ಲಾ ಮಟ್ಟದ ಸಿಇಓ, ಡಿಡಿಪಿಐ, ಡಿಡಿಪಿಯು, ತಾಲೂಕು/ವಲಯ ಮಟ್ಟದ ತಾ.ಪಂ ಇಓ, ಬಿಇಓ, ಬಿ.ಆರ್.ಸಿ/ ಸಿ.ಆರ್.ಪಿ, ಮುಖ್ಯ ಶಿಕ್ಷಕರು, ಪ್ರಾಚಾರ್ಯರು ಮತ್ತು ಅಡುಗೆ ಸಿಬ್ಬಂದಿ ಸೇರಿದಂತೆ ಮೇಲ್ವಿಚಾರಣಾ ತಂಡಗಳು ಸಹಕಾರ ನೀಡಲಿವೆ. ರೋಣ ತಾಲೂಕಿನ ಎಲ್ಲಾ ಸರ್ಕಾರಿ ಶಾಲೆಗಳು ಈ ಕಾರ್ಯಕ್ರಮವನ್ನು ಜುಲೈ ತಿಂಗಳಿನಿಂದ 2025–2026ರ ಶೈಕ್ಷಣಿಕ ಸಾಲಿನ ಪೂರ್ತಿ ನಡೆಸಲಾಗುವುದು.

ಬಿ.ಜಿ. ಅಣ್ಣಿಗೇರಿ ಗುರುಗಳ ಪ್ರತಿಭಾ ಪ್ರತಿಷ್ಠಾನದ ಪ್ರತಿಭಾ ಪುರಸ್ಕಾರ ಮಾಲಿಕೆ–3

# ವಿದ್ಯಾರ್ಥಿಗಳಿಗೆ ಶ್ರದ್ಧೆ, ಶಿಸ್ತು ಬೇಕು



■ವಿಜಯಸಾಕ್ಷಿ ಸುದ್ದಿ, ಗದಗ

ವಿದ್ಯಾರ್ಥಿಗಳು ಕಲಿಕೆಯಲ್ಲಿ ಶ್ರದ್ಧೆ, ಶಿಸ್ತು, ಸಂಯಮ, ಬದ್ಧತೆಯನ್ನು ರೂಢಿಸಿಕೊಂಡು ಏಕಾಗ್ರತೆಯಿಂದ ಅಭ್ಯಾಸ ಮಾಡಿದಲ್ಲಿ ಜೀವನದಲ್ಲಿ ಉನ್ನತ ಹಂತವನ್ನು ತಲುಪಲು ಸಾಧ್ಯವಿದೆ ಎಂದು ಡಾ. ರೇಣುಕಾ ಬಿನ್ನಾಳ ಹೇಳಿದರು.

ಅವರು ಬುಧವಾರ ಗದಗ ತಾಲೂಕಿನ ಬೆಳಹೋಡ ಗ್ರಾಮದ ಪುರದಪ್ಪ ವೀರಪ್ಪ ಹೊಸಳ್ಳಿ ಸರ್ಕಾರಿ ಪ್ರೌಢಶಾಲೆಯಲ್ಲಿ ಶ್ರೀ ಬಿ.ಜಿ. ಅಣ್ಣಿಗೇರಿ ಗುರುಗಳ ಪ್ರತಿಭಾ ಪ್ರತಿಷ್ಠಾನದಿಂದ ಎಸ್.ಎಸ್.ಎಲ್.ಸಿಯಲ್ಲಿ ಮೊದಲ 5 ಸ್ಥಾನಗಳನ್ನು ಪಡೆದುಕೊಂಡ ಗದಗ ತಾಲೂಕಿನ ಸರ್ಕಾರಿ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಮಾತನಾಡಿದರು.

ವಿದ್ಯಾರ್ಥಿಗಳು ಹಿಂದೆ ಗುರು, ಮುಂದೆ ಗುರಿಯನ್ನು ಇಟ್ಟುಕೊಂಡು ಪರಿಶ್ರಮದೊಂದಿಗೆ ಮುನ್ನಡೆದಲ್ಲಿ ಆದರ್ಶ ವ್ಯಕ್ತಿಯಾಗಿ, ಸಾಧಕರಾಗಿ ಹೊರಹೊಮ್ಮಬಲ್ಲರು. ಇಂದು ನೀವು ಪ್ರತಿಷ್ಠಾನದಿಂದ ನಗದು ಪುರಸ್ಕಾರವನ್ನು ಪಡೆದುಕೊಂಡಿದ್ದೀರಿ ಮುಂದಿನ ದಿನಗಳಲ್ಲಿ ನೀವೂ ಪುರಸ್ಕಾರ ನೀಡುವಂತಾಗಬೇಕು ಎಂದರು. ಮುಖ್ಯ ಅತಿಥಿ, ಪ್ರತಿಷ್ಠಾನದ ಅಧ್ಯಕ್ಷ ಶಿವಕುಮಾರ ಎಚ್.ಪಾಟೀಲ ಪ್ರತಿಷ್ಠಾನದ ಧ್ಯೇಯೋದ್ದೇಶಗಳನ್ನು ವಿವರಿಸಿ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಶುಭ ಕೋರಿದರು. ಶಾಲೆಯ ವಿದ್ಯಾರ್ಥಿಗಳಾದ ಸೌಭಾಗ್ಯ ಹೊಸಳ್ಳಿ, ದೇವಮ್ಮ ಹುಲಕೋಟಿ, ರಕ್ಷಿತಾ ಹುಬ್ಬಳ್ಳಿ, ರೋಶನ್ ನದಾಫ್, ಸಾಗರ್ ಹುಬ್ಬಳ್ಳಿ ಅವರಿಗೆ ನಗದು ಪುರಸ್ಕಾರದ ಚೆಕ್, ಪ್ರಮಾಣ ಪತ್ರ, ಕಾಲೇಜ್ ಬ್ಯಾಗ್ ನೀಡಲಾಯಿತು.

ಹಿರೇಹಂದಿಗೋಳದಲ್ಲಿ

ಹಿರೇಹಂದಿಗೋಳ ಗ್ರಾಮದ ಸರ್ಕಾರಿ ಪ್ರೌಢಶಾಲೆಯ ಕಲ್ಲನಗೌಡ ಹಲ್ಲೂರ, ಕವಿತಾ ಕುರ್ತಕೋಟಿ, ಗೀತಾ ನವಲಗುಂದ, ಭಾಗ್ಯಶ್ರೀ ಹಲಗಿ, ಸಂಜನಾ ನರೆಣ್ಣವರ ಅವರಿಗೆ ಪ್ರತಿಭಾ ಪುರಸ್ಕಾರ ನೀಡಲಾಯಿತು. ಅಧ್ಯಕ್ಷತೆಯನ್ನು ಮುಖ್ಯೋಪಾಧ್ಯಾಯ ವ್ಹಿ.ಎಚ್. ಗುಡ್ಲಾನೂರ ವಹಿಸಿದ್ದರು. ಶಾಲೆಯ ಶಿಕ್ಷಕರಾದ ವ್ಹಿ.ಎಲ್. ಪೂಜಾರ, ಯು.ವ್ಹಿ. ಮಟ್ಟಿ, ಎಸ್.ಎಸ್. ಪಾಟೀಲ ಹಾಗೂ ಪ್ರತಿಷ್ಠಾನದ ಪದಾಧಿಕಾರಿಗಳಿದ್ದರು.

ಸಮಾರಂಭದ ಅಧ್ಯಕ್ಷತೆಯನ್ನು ಶಾಲೆಯ ಮುಖ್ಯೋಪಾಧ್ಯಾಯ ಬಿ.ವ್ಹಿ. ಮಲ್ಲನಗೌಡ್ರ ವಹಿಸಿದ್ದರು. ಸಮಾರಂಭದಲ್ಲಿ ಜಿ.ಬಿ. ಕಮಡೊಳ್ಳಿ, ಎಸ್.ಬಿ. ಭಜಂತ್ರಿ, ಎಸ್.ಸಿ. ಲಮಾಣಿ ಸೇರಿದಂತೆ ಪ್ರತಿಷ್ಠಾನದ ಶಿವಾನಂದ ಕತ್ತಿ, ಸುಭಾಸ ಬೆಟದೂರ, ಭಾರತಿ ಪಾಟೀಲ, ರವಿ ದಂಡಿನ, ಸಿದ್ದಣ್ಣ ಕವಲೂರ, ಎಸ್.ಜಿ. ಫಿರಂಗಿ, ನೇಹಾ ಖಟವಟೆ, ಸುಧಾರಾಣಿ, ಶಹಬಾಜ್ ಮುಂತಾದವರಿದ್ದರು.

**ಶ್ಯಾಗೋಟಿಯಲ್ಲಿ:** ಶ್ಯಾಗೋಟಿ ಗ್ರಾಮದ ಸರ್ಕಾರಿ ಪ್ರೌಢಶಾಲೆಯ ನಿರ್ಮಲಾ ನೀಲಿ, ಸುರೇಖಾ ಪೂಜಾರಿ, ಮೇಘಾ ನೀಲಿ, ಸುಧಾ ಆಡಕರ, ಭುವನೇಶ್ವರಿ ಹಳ್ಳಿ ಅವರಿಗೆ ಶಾಲೆಯಲ್ಲಿ ವಿದ್ಯಾರ್ಥಿಗಳ ಸಮ್ಮುಖದಲ್ಲಿ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು.

ಅಧ್ಯಕ್ಷತೆಯನ್ನು ಮುಖ್ಯೋಪಾಧ್ಯಾಯೆ ಸುಧಾ ಮನ್ನಾಪೂರ ವಹಿಸಿದ್ದರು. ಎಸ್‌ಡಿಎಂಸಿ ಅಧ್ಯಕ್ಷ ಶಂಕರಗೌಡ ಪಾಟೀಲ, ಡಾ.ರೇಣುಕಾ ಬಿನ್ನಾಳ, ಶಿಕ್ಷಕರಾದ ರಾಜು ಪವಾರ, ಸಿ.ಬಿ. ಪಾಟೀಲ, ನಿವೃತ್ತ ಶಿಕ್ಷಕ ಎಂ.ಎಚ್. ಮರಿಗೌಡ್ರ, ಪ್ರತಿಷ್ಠಾನದ ಪದಾಧಿಕಾರಿಗಳಿದ್ದರು.

ನೂತನ ಅಂಬ್ಯುಲೆನ್ಸ್ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ಮಾಜಿ ಶಾಸಕ ಜಿ.ಎಸ್. ಗಡ್ಡದೇವರಮಠ

# ಸಮಾಜೋಪಯೋಗಿ ಕಾರ್ಯದಿಂದ ಪುಣ್ಯ ಪ್ರಾಪ್ತಿ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಸುಲೇಮಾನಿಯಾ ಶಾದಿಮಹಲ್‌ನಲ್ಲಿ ಬುಧವಾರ ದೂದನಾನಾ ಮುಹಿಬ್ಬನ್ ಚಾರಿಟೇಬಲ್ ಟ್ರಸ್ಟ್ ವತಿಯಿಂದ ಉಚಿತ ಅಂಬ್ಯುಲೆನ್ಸ್ ಲೋಕಾರ್ಪಣೆ, ಮಾದಕ ವಸ್ತು ವಿರೋಧಿ ಆಂದೋಲನ ಹಾಗೂ ನೂತನ ಪದಾಧಿಕಾರಿಗಳ ಪದಗ್ರಹಣ ಕಾರ್ಯಕ್ರಮ ಜರುಗಿತು.

ಎನ್‌ಪಿಎಂ ಝೈನುದ್ ಅಭಿದ್ ತಂಬಳ್ ಅವರು ಮಾಜಿ ಶಾಸಕ ಜಿ.ಎಸ್. ಗಡ್ಡದೇವರಮಠರಿಗೆ ಅಂಬ್ಯುಲೆನ್ಸ್ ಚಾವಿಯನ್ನು ಹಸ್ತಾಂತರಿಸುವ ಮೂಲಕ ಕಾರ್ಯಕ್ರಮ ಉದ್ಘಾಟಿಸಿದರು. ನಂತರ ಗಡ್ಡದೇವರಮಠ ಮಾತನಾಡಿ, ಉಚಿತ ಅಂಬ್ಯುಲೆನ್ಸ್ ಸೇವೆ ಆರಂಭಿಸಿದ್ದು ಸಮಾಜೋಪಯೋಗಿ ಕೆಲಸವಾಗಿದೆ. ತುರ್ತು ಸಮಯದಲ್ಲಿ ರೋಗಿಗಳನ್ನು ಸಾಗಿಸಲು ಅಂಬ್ಯುಲೆನ್ಸ್ ಉಪಯುಕ್ತವಾಗುತ್ತದೆ. ಕಷ್ಟಪಟ್ಟು ಗಳಿಸಿದ ಸಂಪತ್ತಿನಲ್ಲಿ ಕೆಲ ಭಾಗವನ್ನು ಸಮಾಜದ ಅಭಿವೃದ್ಧಿಗೆ ಖರ್ಚು ಮಾಡಿದರೆ ಪುಣ್ಯ ಲಭಿಸುತ್ತದೆ ಎಂದು ತಿಳಿಸಿದರು.

ಅಬ್ದುಲ್ ಖಾದರ್ ಮಾತನಾಡಿ, ರೋಗಿಗಳಿಗೆ ಸರಿಯಾದ ಸಮಯಕ್ಕೆ ಚಿಕಿತ್ಸೆ ಕೊಡಿಸಲು ಅಂಬ್ಯುಲೆನ್ಸ್‌ಗಳು ಬೇಕೇಬೇಕು. ಬಡ ಜನತೆಗೆ ಅನುಕೂಲವಾಗಲಿ ಎಂಬ ಉದ್ದೇಶದಿಂದ ಅಂಬ್ಯುಲೆನ್ಸ್‌ಗಳ ಸೇವೆ ಆರಂಭಿಸಲಾಗಿದೆ ಎಂದು ಹೇಳಿದರು. ಇಕ್ಬಾಲ್ ಬಾಳಿಲ್ಲ ಮಾತನಾಡಿ, ಯುವ ಜನತೆ ಸಮಾಜ ಸೇವೆ ಮಾಡಲು ಮುಂದಾಗಬೇಕು. ಯುವಕರು ಸಮಾಜದ ಶಕ್ತಿ. ಸುಂದರ ಸಮಾಜ ನಿರ್ಮಾಣಕ್ಕೆ ಅವರು ಶ್ರಮಿಸಬೇಕು. ವಿದ್ಯಾರ್ಥಿಗಳು ಮಾದಕ ಪದಾರ್ಥಗಳ ವ್ಯಸನಿಗಳಾಗುತ್ತಿದ್ದಾರೆ. ಜಾತಿ, ಮತ, ಪಂಥ ಮರೆತು ಸಮಾಜ ಸೇವೆ ಮಾಡಿದಾಗ ದೇವರು ಮೆಚ್ಚುತ್ತಾನೆ ಎಂದರು.

ಎನ್‌ಪಿಎಂ ಝೈನುದ್ ಅಭಿದ್ ತಂಬಳ್, ಇಸ್ಮಾಯಿಲ್ ಆಡೂರ, ಸೈಯದ್ ಜಲಾಲುದ್ದೀನ್ ತಂಬಳ್, ಯು.ಟಿ. ಝುಲ್ಫಿಕಾರ್, ದೂದಪೀರಾಂ ದರ್ಗಾ ಸಮಿತಿ ಅಧ್ಯಕ್ಷ ಸುಲೇಮಾನಸಾಬ್ ಕಣಕೆ, ಅಂಜುಮನ್ ಇಸ್ಲಾಂ ಸಮಿತಿ ಅಧ್ಯಕ್ಷ ಎಂ.ಎಂ. ಗದಗ, ದಾದಾಪೀರ್ ಮುಚ್ಚಾಲೆ, ಫಿರ್ದೋಷ್ ಆಡೂರ, ಸಿಕಂದರಬಾಷಾ ಕಣಕೆ, ಕರವೇ ಸ್ವಾಭಿಮಾನಿ ಬಳಗದ ಜಿಲ್ಲಾ ಘಟಕದ ಅಧ್ಯಕ್ಷ ಶರಣು ಗೋಡಿ, ಎಮ್.ಐ. ಮುಳಗುಂದ, ದುರ್ಗಣ್ಣವರ, ಮುಸ್ತಾಕ್ ಅಹಮ್ಮದ್ ಶಿರಹಟ್ಟಿ, ವಿಜಯ ಕರಡಿ, ಸರೋಜಕ್ಕ ಬನ್ನೂರ, ಶೈಲಾ ಆದಿ, ಮುನೀರ್‌ಅಹಮ್ಮದ ಸಿದ್ದಾಪೂರ ಮುಂತಾದವರು ಹಾಜರಿದ್ದರು.

# ಗ್ರಾ.ಪಂ. ಅಧ್ಯಕ್ಷರ ಆಯ್ಕೆಗೆ ನ್ಯಾಯಾಲಯದ ತಡೆ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸಮೀಪದ ಜಕ್ಕಲಿ ಗ್ರಾಮ ಪಂಚಾಯಿತಿಯಲ್ಲಿ ಬುಧವಾರ ಮಧ್ಯಾಹ್ನ 12ಕ್ಕೆ ಅಧ್ಯಕ್ಷರ ಆಯ್ಕೆ ಪ್ರಕ್ರಿಯೆ ನಿಗದಿಯಾಗಿತ್ತು.

ವಿರೋಧಿ ಸದಸ್ಯರು ಸದ್ಯದ ಅಧ್ಯಕ್ಷೆ ಗಂಗವ್ವ ದ್ಯಾಮಣ್ಣ ಜಂಗಣ್ಣವರ ಅವರ ವಿರುದ್ಧ ಅವಿಶ್ವಾಸ ಗೊತ್ತುವಳಿಯನ್ನು ಮಂಡಿಸಿದ್ದರಿಂದ ಅಧ್ಯಕ್ಷರ ಆಯ್ಕೆಗೆ ಮುಹೂರ್ತ ನಿಗದಿಯಾಗಿತ್ತು.

ಕರ್ನಾಟಕದ ಉಚ್ಚ ನ್ಯಾಯಾಲಯವು ಈ ಆಯ್ಕೆಗೆ ತಡೆಯಾಜ್ಞೆ ನೀಡಿರುವುದರಿಂದ ಸಭೆಯನ್ನು ಮುಂದಿನ ಆದೇಶದವರೆಗೆ ಮುಂದೂಡಲಾಗಿದೆಯೆಂದು ಉಪವಿಭಾಗಾಧಿಕಾರಿಗಳು ಆದೇಶ ಕಳಿಸಿದ ಹಿನ್ನೆಲೆಯಲ್ಲಿ ನೂತನ ಅಧ್ಯಕ್ಷರ ಆಯ್ಕೆ ಪ್ರಕ್ರಿಯೆಯ ಸಭೆಯನ್ನು ರದ್ದುಪಡಿಸಲಾಯಿತು.

ಜಕ್ಕಲಿ ಗ್ರಾಮ ಪಂಚಾಯಿತಿಯಲ್ಲಿ ಯಾರೇ ಅಧ್ಯಕ್ಷರಾದರೂ ಅವರ ಅಧಿಕಾರದ ಅವಧಿ ಕೇವಲ ಆರೇ ತಿಂಗಳು. ಏಕೆಂದರೆ ಅಲ್ಲಿ ಯಾವುದಾದರೊಂದು ನೆಪದಿಂದ ಅಧ್ಯಕ್ಷರ ವಿರುದ್ಧ ಅವಿಶ್ವಾಸ ಗೊತ್ತುವಳಿ ಮಂಡನೆಯಾಗುತ್ತದೆ. ಇದು ಗ್ರಾಮದ ಅಭಿವೃದ್ಧಿಗೆ ಹೊಡೆತ ನೀಡುತ್ತಿದೆ ಎಂಬುದು ಜಕ್ಕಲಿಯ ಸಾರ್ವಜನಿಕರ ಅಳಲು.

ಉಚ್ಚ ನ್ಯಾಯಾಲಯದ ಆದೇಶದ ಹಿನ್ನೆಲೆಯಲ್ಲಿ ಅಧ್ಯಕ್ಷರ ಆಯ್ಕೆ ಸಭೆ ರದ್ದಾಗಿ ಪ್ರಸ್ತುತ ಅಧ್ಯಕ್ಷರೇ ಮುಂದಿನ ಆದೇಶದವರೆಗೂ ಮುಂದುವರೆಯುತ್ತಾರೆ ಎಂದು ತಿಳಿಯುತ್ತಿದ್ದಂತೆ ಅಧ್ಯಕ್ಷೆ ಗಂಗವ್ವ ಜಂಗಣ್ಣವರ ಅವರ ಅಭಿಮಾನಿಗಳು, ಮುತ್ತಣ್ಣ ಕಡಗದ ಮತ್ತಿತರರು ಪಟಾಕಿ ಸಿಡಿಸಿ, ಸಿಹಿ ಹಂಚಿ ಸಂಭ್ರಮಿಸಿದರು.

# ಆನ್‌ಲೈನ್ ಮೂಲಕ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

2025–26ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ನಿರ್ದೇಶನಾಲಯದ ವತಿಯಿಂದ ಯುಪಿಎಸ್‌ಸಿ/ ಕೆಎಎಸ್ ಗೆಜೆಟೆಡ್ ಪ್ರೊಬೇಷನರ್ ವಸತಿಯುತ ತರಬೇತಿಯನ್ನು ಬೆಂಗಳೂರಿನ ಹಜ್ ಭವನದಲ್ಲಿ ಹಾಗೂ ಕೆಪಿಎಸ್‌ಸಿ ಗ್ರೂಪ್ ಸಿ, ಆರ್‌ಆರ್‌ಬಿ & ಎಸ್‌ಎಸ್‌ಸಿ ಪರೀಕ್ಷಾ ಪೂರ್ವ ತರಬೇತಿಯನ್ನು ಪ್ರತಿಷ್ಠಿತ ಸಂಸ್ಥೆಗಳ ಮೂಲಕ ನೀಡಲಾಗುತ್ತಿದೆ.

ಸದರಿ ತರಬೇತಿಗೆ ಅರ್ಹ ಅಲ್ಪಸಂಖ್ಯಾತರ ಸಮುದಾಯದ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ಹಾಗೂ ಅರ್ಹ ಅಲ್ಪಸಂಖ್ಯಾತರ (ಮುಸ್ಲಿಂ, ಜೈನ್, ಕ್ರಿಶ್ಚಿಯನ್, ಸಿಖ್, ಬೌದ್ಧ, ಪರ್ಶಿಯನ್) ಅಭ್ಯರ್ಥಿಗಳು ಸೇವಾ ಸಿಂಧು ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸಬೇಕು. ಅರ್ಜಿ ಸಲ್ಲಿಸಲು ಆಗಸ್ಟ್ 2 ಕೊನೆಯ ದಿನವಾಗಿದೆ. ಅಭ್ಯರ್ಥಿಯು ಕರ್ನಾಟಕ ರಾಜ್ಯದ ನಿವಾಸಿಯಾಗಿರಬೇಕು. ಅಲ್ಪಸಂಖ್ಯಾತರ ಸಮುದಾಯಕ್ಕೆ ಸೇರಿದವರಾಗಿರಬೇಕು. ಅಭ್ಯರ್ಥಿಯು ಸರ್ಕಾರದಿಂದ ಮಾನ್ಯತೆ ಪಡೆದ ವಿಶ್ವವಿದ್ಯಾನಿಲಯದಿಂದ ಪದವಿ ಹೊಂದಿರಬೇಕು. ಅಭ್ಯರ್ಥಿಯ ವಯೋಮಿತಿ: UPSC/KAS ಗೆಜೆಟೆಡ್ ಪ್ರೊಬೇಷನರ್, ಏಕಿಖಲ ಗ್ರೂಪ್ 'ಸಿ' ಕನಿಷ್ಠ 21 ಹಾಗೂ ಗರಿಷ್ಠ 35 ವರ್ಷಗಳು ಮತ್ತು RRB & SSC ತರಬೇತಿಗಳಿಗೆ ಕನಿಷ್ಠ 18 ಹಾಗೂ ಗರಿಷ್ಠ 30 ವರ್ಷಗಳು ಮೀರಿರಬಾರದು. (ಅರ್ಜಿ ಸಲ್ಲಿಸುವ ಅಂತಿಮ ದಿನಾಂಕದೊಳಗೆ) ಕೇಂದ್ರ ಮತ್ತು ರಾಜ್ಯ ಸರ್ಕಾರದ ನೌಕರಿಯಲ್ಲಿರುವ ಅಭ್ಯರ್ಥಿಗಳು ಅರ್ಹರಿರುವುದಿಲ್ಲ. ಹಿಂದಿನ ಸಾಲಿನಲ್ಲಿ ಯುಪಿಎಸ್‌ಸಿ / ಕೆಎಎಸ್ ತರಬೇತಿ ಪಡೆದ ಅಭ್ಯರ್ಥಿಗಳು ಅರ್ಹರಿರುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ ಸಂಖ್ಯೆ: 8277799990 ಇವರನ್ನು ಸಂಪರ್ಕಿಸಬಹುದಾಗಿದೆ. ಹೆಚ್ಚಿನ ಮಾಹಿತಿಗೆ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಗದಗ ಇವರನ್ನು ಸಂಪರ್ಕಿಸಬಹುದಾಗಿದೆ.


## ಗದಗ–ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ, ಗದಗ

**ಟೆಂಡರ್ ಪ್ರಕಟಣೆ**

ಕರ್ನಾಟಕ ಲೋಕೋಪಯೋಗಿ ಇಲಾಖೆಯಲ್ಲಿ ನೊಂದಾಯಿತರಾದ ಆಸಕ್ತಿಯುಳ್ಳ ಗುತ್ತೇದಾರರಿಂದ ಈ ಕೆಳಕಾಣಿಸಿದ ಕಾಮಾಗಾರಿಗೆ ಟೆಂಡರನ್ನು ಇ–ಪ್ರೊಕ್ಯೂರ್‌ಮೆಂಟ್ ಪೋರ್ಟಲ್‌ದಲ್ಲಿ ಸಿವಿಲ್ ಕಾಮಗಾರಿಗಳ ಕೆಟಿಪಿಪಿ ನಿಯಮಾನುಸಾರ KW2 ದಾಸ್ತಾ–ವೆಜುಗಳನ್ವಯ ಇಂಡೆಂಟ್ ಸಂ: GBUDA/2025-26/OW/Work_Indent12, GBUDA/2025-26/OW/Work_Indent13, GBUDA/2025-26/OW/Work_Indent14 ಅಲ್ಲದೇ ಮಾನವ ಸಂಪನ್ಮೂಲಗಳನ್ನು ಪೂರೈಸಲು GBUDA/2025-26/SE006 call-2 ಇ–ಪ್ರೊಕ್ಯೂರ್‌ಮೆಂಟ್ ಮುಖಾಂತರ ಟೆಂಡರ್ ಆಹ್ವಾನಿಸಲಾಗಿದೆ. ಇದಕ್ಕಾಗಿ ಅರ್ಹ ಗುತ್ತೇದಾರರು/ಏಜೆನ್ಸಿಯವರು ಅಂತರ್ಜಾಲದ ಮೂಲಕ ವೆಬ್‌ಸೈಟ್ ವಿಳಾಸ https://kppp.karnataka.gov.in/ನ್ನು ಸಂದರ್ಶಿಸಬಹುದಾಗಿರುತ್ತದೆ. ಹೆಚ್ಚಿನ ಮಾಹಿತಿ ಬೇಕಾದಲ್ಲಿ ಗುತ್ತೇದಾರರು ಈ ಕೆಳೆಗೆ ಸಹಿ ಮಾಡಿದ ಅಧಿಕಾರಿಗಳ ಕಚೇರಿಯಲ್ಲಿ ಕಚೇರಿ ಕೆಲಸದ ವೇಳೆಯಲ್ಲಿ ಪಡೆಯಬಹುದಾಗಿರುತ್ತದೆ.

**ಸೂಚನೆ:** ಕಾರಣಾಂತರಗಳಿಂದಾಗಿ ಈ ಕೆಳಗೆ ತಿಳಿಯಪಡಿಸಿದ ಟೆಂಡರ್ ದಿನಾಂಕಗಳು ಹಾಗೂ ಇನ್ನಿತರೆ ಯಾವುದೇ ಬದಲಾವಣೆಗಳಾದಲ್ಲಿ ಗುತ್ತೇದಾರರು ಇ–ಪ್ರೊಕ್ಯೂರ್‌ಮೆಂಟ್ ಪೋರ್ಟಲ್‌ನಲ್ಲಿ ಗಮನಿಸಬಹುದಾಗಿದೆ. ಸಿವ್ಹಿಲ್ ಕಾಮಗಾರಿಗಳ ಟೆಂಡರ್‌ಗಳಲ್ಲಿ ಭಾಗವಹಿಸಲು ಇಚ್ಚೆಯುಳ್ಳವರು ತಾಂತ್ರಿಕ ಅರ್ಹತೆಯ ದಾಖಲಾತಿಗಳನ್ನು Corregendumದಲ್ಲಿ ನೀಡಲಾಗಿದೆ. ಸದರ ಇ–ಪೋರ್ಟಲ್‌ದಲ್ಲಿ ಅಗತ್ಯ ದಾಖಲಾತಿಗಳನ್ನು ಸಲ್ಲಿಸಿ ಭಾಗವಹಿಸಬಹುದಾಗಿದೆ.

**ಟೆಂಡರ್‌ಗಾಗಿ ನಿಗದಿಪಡಿಸಿದ ದಿನಾಂಕಗಳು ಕೆಳಗಿನಂತಿವೆ:**

| | | |
|---|---|---|
| 01 | ಟೆಂಡರ್ ಆಕ್ಷೇಪಣೆಗಾಗಿ ನಿಗದಿಪಡಿಸಲಾದ ದಿನಾಂಕ: | 03–07–2025 ರಂದು 12:00 ಗಂಟೆಗೆ |
| 02 | ಇ–ಪ್ರೊಕ್ಯೂರ್‌ಮೆಂಟ್ ಮುಖಾಂತರ ಟೆಂಡರನ್ನು ಸಲ್ಲಿಸಲುಕೊನೆಯ ದಿನಾಂಕ ಮತ್ತು ಸಮಯ | 18–07–2025 ರಂದು 16:00 ಗಂಟೆಗೆ |
| 03 | ತಾಂತ್ರಿಕ ಬಿಡ್ ಆರ್ಥಿಕ ಬಿಡ್‌ನ್ನು ತೆರೆಯುವ ದಿನಾಂಕ ಮತ್ತು ಸಮಯ. | 21–07–2025 04:30 ಗಂಟೆಗೆ |

ಟೆಂಡರ್‌ನಲ್ಲಿನ ಹೆಚ್ಚಿನ ಮಾಹಿತಿಗಾಗಿ ರಜಾ ದಿನಗಳನ್ನು ಹೊರತುಪಡಿಸಿ ಕಚೇರಿ ವೇಳೆಯಲ್ಲಿ ಅಥವಾ https://kppp.karnataka.gov.in/ ವೆಬ್‌ಸೈಟನಲ್ಲಿ ಅಥವಾ ಈ ಕಚೇರಿಯ ದೂರವಾಣಿ ಸಂಖ್ಯೆ: 08372–278003 ರವರಿಂದ ಪಡೆಯಬಹುದಾಗಿದೆ ನಿಬಂಧನೆಗಳು **(1)** ಯಾವುದೇ ಕಾರಣಕ್ಕೂ ನಿಗದಿಪಡಿಸಿದ ಕೊನೆಯ ದಿನಾಂಕದಂದು ಸಂಪರ್ಕಜಾಲ (ಆನ್‌ಲೈನ್) ಸಿಗದಿದ್ದರೆ ಈ ಕಚೇರಿ ಜವಾಬ್ದಾರಿಯಾಗಿರುವುದಿಲ್ಲ **(2)** ಯಾವುದೇ ಟೆಂಡರ್ ಅಂಗೀಕರಿಸುವ ಅಥವಾ ತಿರಸ್ಕರಿಸುವ ಅಧಿಕಾರ ಆಯುಕ್ತರು, ಗದಗ–ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ, ಗದಗ ಇವರು ಕಾಯ್ದಿರಿಸಿಕೊಂಡಿರುತ್ತಾರೆ ಹಾಗೂ ಇನ್ನುಳಿದ ಎಲ್ಲಾ ಷರತ್ತುಗಳು ಅನ್ವಯವಾಗಿತ್ತದೆ.

**ಸಹಿ/– ಆಯುಕ್ತರು**
**ನಗರಾಭಿವೃದ್ಧಿ ಪ್ರಾಧಿಕಾರ ಗದಗ–ಬೆಟಗೇರಿ**

**ವಾ.ಸಾ.ಇ/ಗದಗ/148/ದೇಶಪಾಂಡೆಪಬ್ಲಿಸಿಟಿ/2025–26**


ಸಮಾಜಕ್ಕೆ ಮಾದರಿಯಾದ ಶ್ರೀ ವಿರೇಶ್ವರ ಪುಣ್ಯಾಶ್ರಮದ ಪೀಠಾಧಿಪತಿ ಪೂಜ್ಯಶ್ರೀ ಡಾ. ಕಲ್ಲಯ್ಯಜ್ಜನವರು

# 55ನೇ ವರ್ಷದ ಜನ್ಮದಿನಾಚರಣೆ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ಬಾಲ್ಯದಲ್ಲಿ ಅಂಧತ್ವಕ್ಕೆ ಶರಣಾಗಿ ಗದುಗಿನ ಸುಕ್ಷೇತ್ರ ಶ್ರೀ ವೀರೇಶ್ವರ ಪುಣ್ಯಾಶ್ರಮದ ಗಾನಯೋಗಿ ಪಂ. ಪುಟ್ಟರಾಜ ಕವಿ ಗವಾಯಿಗಳವರ ಶಿಷ್ಯರಾಗಿ ಅಭ್ಯಾಸಗೈಯುತ್ತ ಸರಳ ಬದುಕಿನ ವಿದ್ಯಾರ್ಥಿಯಾಗಿ ಇಂದು ಗದುಗಿನ ಶ್ರೀ ವೀರೇಶ್ವರ ಪುಣ್ಯಾಶ್ರಮದ ಪೀಠಾಧಿಪತಿಗಳಾಗಿ, ಉಭಯ ಗುರುಗಳ ಮಾರ್ಗದರ್ಶನದಂತೆ ಅಂಧ–ಅನಾಥರಿಗೆ ಅಭಯ ಹಸ್ತ ನೀಡಿ ಆಶ್ರಮವನ್ನು ಮುನ್ನಡೆಸಿಕೊಂಡು ಹೋಗುತ್ತಿರುವ ಪರಮಪೂಜ್ಯ ಶ್ರೀ ಕಲ್ಲಯ್ಯಜ್ಜನವರ ಜೀವನ ಸಮಾಜಕ್ಕೆ ಮಾದರಿಯಾಗಿದೆ.

ಪೂಜ್ಯಶ್ರೀ ಕಲ್ಲಯ್ಯಜ್ಜನವರು ಕೊಪ್ಪಳ ಜಿಲ್ಲೆಯ ಯಲಬುರ್ಗಾ ತಾಲೂಕಿನ ಕಲ್ಲೂರು ಗ್ರಾಮದಲ್ಲಿ 1971ರ ಜುಲೈ 3ರಂದು ಶ್ರೀ ವೀರಯ್ಯನವರು ಹಿರೇಮಠ ಹಾಗೂ ಮಾತೋಶ್ರೀ ಬಸಮ್ಮನವರ ಪುತ್ರರಾಗಿ ಜನ್ಮತಾಳಿದರು. ಗಂಗಾವತಿ ತಾಲೂಕಿನ ಉಡಮಕಲ್ ಗ್ರಾಮದಲ್ಲಿ ಪ್ರಾಥಮಿಕ ಶಿಕ್ಷಣ ಪೂರೈಸಿದ ಕಲ್ಲಯ್ಯಜ್ಜನವರು ನಂತರ ಗದುಗಿನ ಕೆ.ಎಚ್. ಪಾಟೀಲ ಶಿಕ್ಷಣ ಸಂಸ್ಥೆಯಲ್ಲಿ ಪಿಯುಸಿ ಶಿಕ್ಷಣ ಪಡೆದರು. ಅಲ್ಲಿಂದ ಪಂ. ಪಂಚಾಕ್ಷರ ಗವಾಯಿಗಳವರ ಸಂಗೀತ ಮಹಾವಿದ್ಯಾಲಯದಲ್ಲಿ ಬಿ.ಮ್ಯೂಸಿಕ್ ಪದವಿ ಪಡೆದರು.

ಡಾ. ಪಂ. ಪುಟ್ಟರಾಜ ಕವಿ ಗವಾಯಿಗಳವರಲ್ಲಿ ಜೂನಿಯರ್, ಸೀನಿಯರ್, ವಿದ್ವತ್ ದರ್ಜೆ ಸಂಗೀತ ಅಭ್ಯಾಸವನ್ನು ಪಡೆದರು. ಸಂಸ್ಥೆಯಲ್ಲಿ ಎರಡು ವರ್ಷ



ಆಶ್ರಮದ ಪ್ರಾಧ್ಯಾಪಕರಾಗಿಯೂ ಸೇವೆ ಸಲ್ಲಿಸಿದರು. ಗುರುವಿನ ಆಶೀರ್ವಾದದಿಂದ ಸ್ವಂತ ಕವಿಗಳಾಗಿ ನಾಟಕ ಹಾಗೂ ಕವನಗಳನ್ನು ಅಲ್ಲದೆ, ತಮ್ಮ ಗುರುಗಳಾದ ಪದ್ಮಭೂಷಣ ಡಾ. ಪಂ. ಪುಟ್ಟರಾಜ ಕವಿ ಗವಾಯಿಗಳವರ ಚರಿತಾಮೃತ ಕುರಿತು 'ಧರೆಗೆ ಬಂದ ದೇವರು'

2001ರ ಸೆಪ್ಟಂಬರ್ 17ರಂದು ಪಂ. ಪುಟ್ಟರಾಜ ಕವಿ ಗುರುಗಳ ಅಪ್ಪಣೆಯ ಮೇರೆಗೆ ಶ್ರೀ ವೀರೇಶ್ವರ ಪುಣ್ಯಾಶ್ರಮಕ್ಕೆ ಮರಳಿ ಬಂದು ಹೆಚ್ಚಿನ ಸಂಗೀತ ವಿದ್ಯಾಭ್ಯಾಸ ಪಡೆದರು. ಪೂಜ್ಯಶ್ರೀ ಪಂ. ಪುಟ್ಟರಾಜ ಕವಿ ಗವಾಯಿಗಳವರ ನಂತರ ಶ್ರೀ ವೀರೇಶ್ವರ ಪುಣ್ಯಾಶ್ರಮದ ಪೀಠಾಧಿಪತಿಗಳಾಗಿ ಆಶ್ರಮವನ್ನು ಮುನ್ನಡೆಸುತ್ತಿದ್ದಾರೆ.

ಎಂಬ ಗ್ರಂಥವನ್ನು ರಚಿಸಿದ್ದಾರೆ. ಗುರುವಿನ ಮೇಲೆ ಇಟ್ಟಿರುವ ಭಕ್ತಿ ಪ್ರೇಮದ ಕಾಣಿಕೆಯಾಗಿ ಇವರಿಗೆ ನೂರಾರು ತುಲಾಭಾರ ಸೇವೆಗಳು ಜರುಗಿವೆ. ಬಡವ–ಬಲ್ಲಿದರ, ದೀನ–ದಲಿತರ ಕಣ್ಮಣಿಗಳು, ಪುಣ್ಯಾಶ್ರಮದ ಸರ್ವಾಂಗೀಣ ಅಭಿವೃದ್ಧಿಯ ಹರಿಕಾರರು, ಅವಳಿ ನಗರದ ಪುಣ್ಯಧಾಮ, ಸಂಗೀತ ಕಾಶಿ ಸುಕ್ಷೇತ್ರ ಶ್ರೀ ವೀರೇಶ್ವರ ಪುಣ್ಯಾಶ್ರಮದ ಪೀಠಾಧಿಪತಿಗಳಾಗಿರುವ ಪರಮಪೂಜ್ಯ ಶ್ರೀ ಡಾ.ಕಲ್ಲಯ್ಯಜ್ಜನವರ 55ನೇ ವರ್ಷದ ಜನ್ಮದಿನದ ಸಂಭ್ರಮಾಚರಣೆಯು ಜುಲೈ 3ರಂದು ಸಂಜೆ 6 ಗಂಟೆಗೆ ಶ್ರೀ ವೀರೇಶ್ವರ ಪುಣ್ಯಾಶ್ರಮದ ಶ್ರೀಗುರು ಪುಟ್ಟರಾಜ ಕಲಾಭವನದಲ್ಲಿ ಜರುಗಲಿದೆ.

ಈ ಕಾರ್ಯಕ್ರಮದಲ್ಲಿ ಕಪೋತಗಿರಿ ನಂದಿವೇರಿ ಸಂಸ್ಥಾನ ಮಠದ ಪೂಜ್ಯಶ್ರೀ ಶಿವಕುಮಾರ ಮಹಾಸ್ವಾಮಿಗಳು ಹಾಗೂ ಲಿಂಗಸೂರ ಮಾಣಿಕೇಶ್ವರಿ ಆಶ್ರಮದ ಪೂಜ್ಯಶ್ರೀ ಶಿವಶರಣೆ ನಂದೀಶ್ವರಿ ಅಮ್ಮನವರು ದಿವ್ಯ ಸಾನ್ನಿಧ್ಯ ವಹಿಸಲಿದ್ದಾರೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka